# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ

EDITOR: MAHESHWARI BHIMASHI BHARAMANNAVARA

BELAGAVI VARTE

KANNADA DAILY MORNING BELAGAVI

G-mail: belagavivarte1@gmail.com

epaper. belagavivarte.com

Regd No : G2/PMG/KA/NK/BM/157/26-28

Volume: 01 Issue : 77 SATURDAY 30-05-2026 PRGI No : KNKAN/26/A0962 Pages:4 Rs.2.00 M: 9742418836


## ನನಗೆ ಯಾವುದೇ ಹುದ್ದೆ ನೀಡುವುದು ಹೈಕಮಾಂಡ್ ಮತ್ತು ಸಿಎಂಗೆ ಬಿಟ್ಟ ನಿರ್ಧಾರ: ಸತೀಶ್ ಜಾರಕಿಹೊಳಿ



ಬೆಂಗಳೂರು: ಮುಂದಿನ ಕರ್ನಾಟಕ ಕಾಂಗ್ರೆಸ್ ಅಧ್ಯಕ್ಷರಾಗಿ ತಮ್ಮ ಹೆಸರನ್ನು ಪರಿಗಣಿಸಲಾಗುತ್ತಿದೆ ಎಂಬ ಊಹಾಪೋಹಗಳನ್ನು ಹಿರಿಯ ಕಾಂಗ್ರೆಸ್ ನಾಯಕ ಸತೀಶ್ ಜಾರಕಿಹೊಳಿ ಶುಕ್ರವಾರ ತಳ್ಳಿಹಾಕಿದರು. ನಿರ್ಗಮಿತ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯ ಮಂತ್ರಿ ಡಿ.ಕೆ. ಶಿವಕುಮಾರ್ ಅವರು ಪಕ್ಷದ ಹೈಕಮಾಂಡ್ ಜೊತೆಗಿನ ಚರ್ಚೆಗಳ ಬಳಿಕ ದೆಹಲಿಯಿಂದ ಮರಳಿದ ನಂತರ ವೇ ಯಾವುದೇ ತೀರ್ಮಾನ ಕೈಗೊಳ್ಳ ಲಾಗುತ್ತದೆ ಎಂದು ಅವರು ಹೇಳಿದರು.

ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತ ನಾಡಿದ ಸತೀಶ್ ಜಾರಕಿಹೊಳಿ, ಸೋನಿ ಯಾ ಗಾಂಧಿ ಹಾಗೂ ರಾಹುಲ್ ಗಾಂಧಿ ಸೇರಿದಂತೆ ಹಿರಿಯ ನಾಯಕರೊಂದಿಗೆ ಸಮಾಲೋಚನೆ ನಡೆಸಿದ ನಂತರ ಪಕ್ಷದ ನಾಯಕತ್ವ ಅಂತಿಮ ನಿರ್ಧಾರ ಕೈಗೊಳ್ಳಲಿದೆ ಎಂದು ಹೇಳಿದರು.

ನಾನು ಈಗಾಗಲೇ ಹೇಳಿದ್ದೇನೆ, ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ದೆಹಲಿಗೆ ಹೋಗಿದ್ದಾರೆ. ಅವರು ಪಕ್ಷದೊಂದಿಗೆ ಚರ್ಚೆ ನಡೆಸಲಿದ್ದಾರೆ. ಅಲ್ಲಿ ಯಾವ ತೀರ್ಮಾನ ಕೈಗೊಳ್ಳಲಾಗುತ್ತದೆಯೋ ಅದನ್ನು ನಾವು ಒಪ್ಪಿಕೊಳ್ಳುತ್ತೇವೆ. ನನಗೆ ಇನ್ನೂ ಮಾಹಿತಿ ಇಲ್ಲ. ಮುಖ್ಯಮಂತ್ರಿಗಳು ಬೆಂಗಳೂರಿಗೆ ಮರಳಿದ ಬಳಿಕ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ಅವರೊಂದಿಗೆ ದೆಹಲಿಯಲ್ಲಿ ನಡೆದ ಚರ್ಚೆಗಳ ಬಗ್ಗೆ ಮಾತುಕತೆ ನಡೆಸಿ, ನಂತರ ತೀರ್ಮಾನ ಕೈಗೊಳ್ಳಲಾಗುತ್ತದೆ ಎಂದು ಜಾರಕಿಹೊಳಿ ಹೇಳಿದರು.

ತಾವು ಸಚಿವ ಸಚಿವ ಸ್ಥಾನ ಆಕಾಂಕ್ಷಿಯಲ್ಲವೆಂದು ಸ್ಪಷ್ಟಪಡಿಸಿದ ಅವರು, ಸಚಿವ ಸಂಪುಟ ರಚನೆ ಕುರಿತ ಚರ್ಚೆಗಳು ಇನ್ನೂ ಆರಂಭವಾಗಿಲ್ಲ ಎಂದು ಹೇಳಿದರು.

ನಾನು ಸ್ವತಃ ಯಾವುದೇ ಹುದ್ದೆಯ ಆಸೆಪಡುವವನಲ್ಲ. ಚರ್ಚೆಗಳು ಇನ್ನೂ ಆರಂಭವಾಗಿಲ್ಲ. ಚರ್ಚೆಗಳು ನಡೆದಾಗ ನಮ್ಮ ಅಭಿಪ್ರಾಯವನ್ನು ತಿಳಿಸುತ್ತೇವೆ. ಈಗ ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಏನು ಚರ್ಚಿಸಿ ತರುತ್ತಾರೋ ಅದರ ಆಧಾರದ ಮೇಲೆ ತೀರ್ಮಾನ ಕೈಗೊಳ್ಳಲಾಗುತ್ತದೆ ಎಂದು ಹೇಳಿದರು

ಹೊಸ ಸರ್ಕಾರದ ಸಾಧ್ಯತೆಯ ರಚನೆ ಕುರಿತು ಮಾತನಾಡಿದ ಜಾರಕಿಹೊಳಿ, ಎಷ್ಟು ಉಪಮುಖ್ಯಮಂತ್ರಿಗಳನ್ನು ನೇಮಿಸಲಾಗುತ್ತದೆ ಎಂಬುದರ ಬಗ್ಗೆ ಇನ್ನೂ ಸ್ಪಷ್ಟತೆ ಇಲ್ಲ ಎಂದು ಹೇಳಿದರು. ನಾಳೆ ಸಂಜೆ ವೇಳೆಗೆ ಎಲ್ಲವೂ ಸ್ಪಷ್ಟವಾಗುವ ನಿರೀಕ್ಷೆಯಿದೆ ಎಂದರು.

ಎಷ್ಟು ಉಪಮುಖ್ಯಮಂತ್ರಿಗಳನ್ನು ನೇಮಿಸಲಾಗುತ್ತದೆ ಅಥವಾ ಇಲ್ಲ ಎಂಬುದರ ಬಗ್ಗೆ ನನಗೆ ಮಾಹಿತಿ ಇಲ್ಲ. ನಾವು ಕಾಯಬೇಕಾಗಿದೆ. ನಾಳೆ ಸಂಜೆ ವೇಳೆಗೆ ಎಲ್ಲವೂ ಸಂಪೂರ್ಣ ಸ್ಪಷ್ಟವಾಗುತ್ತದೆ. ಸಿದ್ಧತೆಗಳು ಸರಳವಾಗಿರುತ್ತವೆ, ಅದರಲ್ಲಿ ವಿಶೇಷವೇನೂ ಇಲ್ಲ. ಬಹುಶಃ ಸೋಮವಾರದೊಳಗೆ ಪ್ರಕ್ರಿಯೆ ಮುಗಿಯಬಹುದು. ಸೋಮವಾರದೊಳಗೆ ಅಥವಾ ಗರಿಷ್ಠ ಮಂಗಳವಾರದೊಳಗೆ ಅಂತಿಮಗೊಳ್ಳುತ್ತದೆ ಎಂದು ಕೇಳಿದ್ದೇವೆ ಎಂದರು.

## ನಾಯಕತ್ವ ಬದಲಾವಣೆ ರಾಜ್ಯ ಆಡಳಿತದ ಮೇಲೆ ಪರಿಣಾಮ ಬೀರುತ್ತದೆಯೇ..?

ಬೆಂಗಳೂರು: ಕಳೆದ ಒಂದು ದಶಕದಲ್ಲಿ ಕರ್ನಾಟಕದಲ್ಲಿ ಹಲವು ಬಾರಿ ಮುಖ್ಯಮಂತ್ರಿ ಬದಲಾವಣೆ ನಡೆದಿದ್ದು, ಇದರಿಂದ ಆಡಳಿತದ ಮೇಲೆ ಪರಿಣಾಮ ಬೀರುತ್ತದೆಯೇ ಎಂಬ ಪ್ರಶ್ನೆ ಮತ್ತೆ ಮುನ್ನೆಲೆಗೆ ಬಂದಿದೆ.

ಸಿದ್ದರಾಮಯ್ಯ ಅವರು ಗುರುವಾರ ರಾಜೀನಾಮೆ ಸಲ್ಲಿಸಿದ ಬಳಿಕ, ಇದೀಗ ಡಿಕೆ.ಶಿವಕುಮಾರ ಮುಂದಿನ ಮುಖ್ಯಮಂತ್ರಿಯಾಗುವ ಸಾಧ್ಯತೆಗಳಿದ್ದು, ಈ ನಡುವೆ ನಾಯಕತ್ವ ಬದಲಾವಣೆ ಕುರಿತು ರಾಜಕೀಯ ವಿಶ್ಲೇಷಕರು ವಿಭಿನ್ನ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

2013ರಲ್ಲಿ ಮೊದಲ ಬಾರಿ ಮುಖ್ಯಮಂತ್ರಿ ಆದ ಸಿದ್ದರಾಮಯ್ಯ 2018ರವರೆಗೆ ಪೂರ್ಣಾವಧಿ ಆಡಳಿತ ನಡೆಸಿದ್ದರು. ಬಳಿಕ 2018ರ ವಿಧಾನಸಭೆ ಚುನಾವಣೆಯ ನಂತರ ಹೆಚ್.ಡಿ. ಕುಮಾರಸ್ವಾಮಿ ಕಾಂಗ್ರೆಸ್-ಜೆಡಿಎಸ್ ಮೈತ್ರಿ ಸರ್ಕಾರದ ಮುಖ್ಯಮಂತ್ರಿಯಾದರು.

ನಂತರ ಮೈತ್ರಿ ಸರ್ಕಾರ ಕುಸಿದ ಹಿನ್ನೆಲೆ 2019ರಲ್ಲಿ ಬಿಜೆಪಿ ಸರ್ಕಾರ ರಚನೆಯಾಗಿ ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿಯಾದರು. 2021ರಲ್ಲಿ ಅವರ ಸ್ಥಾನಕ್ಕೆ ಬಸವರಾಜ ಬೊಮ್ಮಾಯಿ ಅಧಿಕಾರ ಸ್ವೀಕರಿಸಿದರು. 2023ರಲ್ಲಿ ಮತ್ತೆ ಸಿದ್ದರಾಮಯ್ಯ ಅಧಿಕಾರಕ್ಕೆ ಬಂದಿದ್ದರು.



ಕಾಂಗ್ರೆಸ್‌ನ ಹಿರಿಯ ನಾಯಕನೊಬ್ಬರು ಮಾತನಾಡಿ, ಮುಖ್ಯಮಂತ್ರಿ ಬದಲಾವಣೆಯಿಂದ ಲಾಭ-ನಷ್ಟ ಎರಡೂ ಇವೆ. "ಹೊಸ ಮುಖ್ಯಮಂತ್ರಿಗಳು ಹೊಸ ಆಲೋಚನೆಗಳು ಮತ್ತು ಹೊಸ ದಿಕ್ಕು ತರುತ್ತಾರೆ. ಆದರೆ, ಹಿಂದಿನ ಸರ್ಕಾರ ಆರಂಭಿಸಿದ್ದ ಯೋಜನೆಗಳು ಮತ್ತು ನೀತಿಗಳು ಮುಂದುವರಿಯದಿರುವ ಸಾಧ್ಯತೆಯೂ ಇದೆ ಎಂದು ಹೇಳಿದ್ದಾರೆ.

ಇತ್ತೀಚಿನ ವರ್ಷಗಳಲ್ಲಿ ಒಂದು ಸರ್ಕಾರ ಜಾರಿಗೆ ತಂದ ಹಲವು ಕಾನೂನುಗಳನ್ನು ಮುಂದಿನ ಸರ್ಕಾರ ಹಿಂತೆಗೆದುಕೊಂಡ ಉದಾಹರಣೆಗಳಿವೆ. ಪಠ್ಯಪುಸ್ತಕಗಳ ವಿಷಯದಲ್ಲೂ ಸರ್ಕಾರ ಬದಲಾದಾಗ ಬದಲಾವಣೆಗಳು ನಡೆದಿವೆ ಎಂದು ಉಲ್ಲೇಖಿಸಿದ್ದಾರೆ.

ಪ್ರತಿ ಹೊಸ ಮುಖ್ಯಮಂತ್ರಿ ತಮ್ಮದೇ ಸಚಿವ ಸಂಪುಟ ರಚಿಸುವುದರಿಂದ, ಸಚಿವರು ತಮ್ಮ ಅನುಕೂಲದ ಐಎಎಸ್ ಅಧಿಕಾರಿಗಳನ್ನು ಆಯ್ಕೆ ಮಾಡಲು ಮುಂದಾಗುತ್ತಾರೆ. ಇದರಿಂದ ಅಧಿಕಾ ರಿಗಳ ವರ್ಗಾವಣೆ ಹೆಚ್ಚಾಗಿ ಆಡಳಿತ ವ್ಯವಸ್ಥೆ ಮೇಲೆ ಪರಿಣಾಮ ಬೀಳುತ್ತದೆ. ಯೋಜನೆಗಳ ಜಾರಿಗೆ ವಿಳಂಬವಾಗುವ ಸಾಧ್ಯತೆ ಯೂ ಇದೆ ಎಂದು ಅಭಿಪ್ರಾಯ ಪಟ್ಟಿದ್ದಾ ರೆ.

ಆದರೆ, ರಾಜಕೀಯ ತಜ್ಞ ಪ್ರೊ. ಸಂದೀಪ್ ಶಾಸ್ತ್ರಿ ಈ ಅಭಿಪ್ರಾಯವನ್ನು ನಿರಾಕರಿಸಿದ್ದಾರೆ. "ಮುಖ್ಯಮಂತ್ರಿಯ ಅವಧಿ ಮತ್ತು ಉತ್ತಮ ಆಡಳಿತದ ನಡುವೆ ನೇರ ಸಂಬಂಧವಿಲ್ಲ. 1999ರ ಬಳಿಕ ಎಸ್.ಎಂ. ಕೃಷ್ಣ ಮತ್ತು ಸಿದ್ದರಾಮಯ್ಯ ಮಾತ್ರ ಸ್ಥಿರ ಅವಧಿಯ ಮುಖ್ಯಮಂತ್ರಿಗಳಾಗಿದ್ದರು. ಆದರೆ, ಪೂರ್ಣಾವಧಿ ಅಧಿಕಾರದಲ್ಲಿರುವುದೇ ಉತ್ತಮ ಆಡಳಿತಕ್ಕೆ ಗ್ಯಾರಂಟಿ ಅಲ್ಲ ಎಂದು ಹೇಳಿದ್ದಾರೆ.

## ವಿದ್ಯಾರ್ಥಿಗಳ ಸತ್ಕೀರ್ತಿಯೇ ಗುರುಗಳಿಗೆ ನಿಜವಾದ ಗುರುದಕ್ಷಿಣೆ: ಪ್ರಾಚಾರ್ಯ ಡಾ. ಸುರೇಶ ಹನಗಂಡಿ



**ಬೆಳಗಾವಿ ವಾರ್ತೆ ಮೂಡಲಗಿ:** ವರ್ಷಗಳು ಉರುಳಿದ ರೂ ಶಿಕ್ಷಕರ ಮೇಲಿನ ಗೌರವವನ್ನು ಹಾಗೇ ಉಳಿಸಿಕೊಂಡು ಬಂದು, ಇವತ್ತು ಗುರುವಂದನೆ ಸಲ್ಲಿಸಿರುವುದು ಶ್ಲಾಘನೀಯ ಕಾರ್ಯ. ವಿದ್ಯಾರ್ಥಿಗಳ ಯಶಸ್ಸು ಮತ್ತು ಸಮಾಜದಲ್ಲಿ ಅವರು ಗಳಿಸುವ ಸತ್ಕೀರ್ತಿಯೇ ಶಿಕ್ಷಕರಿಗೆ ಸಿಗುವ ಅತಿ ದೊಡ್ಡ ಗುರುದಕ್ಷಿಣೆ ಎಂದು ಶ್ರೀ ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಪದವಿ ಕಾಲೇಜಿನ ಪ್ರಾಚಾರ್ಯ ಡಾ. ಸುರೇಶ ಹನಗಂಡಿ ನುಡಿದರು.

ಗುರುವಾರ ಕಲ್ಲೋಳಿ ಶ್ರೀ ರಾಮಲಿಂಗೇಶ್ವರ ಶಿಕ್ಷಣ ಸಂಸ್ಥೆಯ ಪ್ರೌಢಶಾಲೆಯ 2006-07ನೇ ಸಾಲಿನ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳು ಆಯೋಜಿಸಿದ್ದ ಗುರುವಂದನಾ ಹಾಗೂ ಹಳೆ ವಿದ್ಯಾರ್ಥಿಗಳ ಸ್ನೇಹ ಸಮ್ಮಿಲನ ಕಾರ್ಯಕ್ರಮವನ್ನು ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ, ಸಸಿಗೆ ನೀರುಣಿಸುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ವಿದ್ಯಾರ್ಥಿ ಜೀವನದಲ್ಲಿ ಪ್ರೌಢಶಾಲೆಯ ದಿನಗಳು ಅತ್ಯಂತ ಪ್ರಮುಖವಾದ ಘಟ್ಟ. ಅಂದು ಗುರುಗಳು ಬಿತ್ತಿದ ಜ್ಞಾನದ ಬೀಜ ಇಂದು ಸಮಾಜದಲ್ಲಿ ದೊಡ್ಡ ವೃಕ್ಷವಾಗಿ ಬೆಳೆದು ನಿಂತಿದೆ. ಹಳೆಯ ವಿದ್ಯಾರ್ಥಿಗಳು ತಾವು ಯಾವುದೇ ಉನ್ನತ ಹುದ್ದೆಯಲ್ಲಿದ್ದರೂ, ತಮಗೆ ಅಕ್ಷರ ಕಲಿಸಿದ ಶಾಲೆ ಮತ್ತು ಊರನ್ನು ಮರೆಯದೆ ಇಂತಹ ಸಮ್ಮಿಲನ ಆಯೋಜಿಸಿರುವುದು ಅವರ ಕೃತಜ್ಞತಾ ಭಾವವನ್ನು ಎತ್ತಿ ತೋರಿಸುತ್ತದೆ ಎಂದರು.

ಶಿಕ್ಷಕ ಆರ್.ಪಿ. ಬಾಗೋಜಿ ಮಾತನಾಡಿ, ನಮ್ಮನ್ನು ನೆನಪಿಟ್ಟುಕೊಂಡು ಈ ರೀತಿ ಸತ್ಕರಿಸಿದ ನಿಮ್ಮೆಲ್ಲರ ಪ್ರೀತಿ ಮನಸ್ಸಿಗೆ ತುಂಬ ಖುಷಿ ನೀಡಿದೆ. ನಿಮ್ಮೆಲ್ಲರ ಮುಂದಿನ ಜೀವನ ಸುಖಕರವಾಗಿರಲಿ ಎಂದು ಹಾರೈಸಿದರು.

ಶಿಕ್ಷಕಿ ಎಂ.ಎ. ಹೂಗಾರ ಮಾತನಾಡಿ, ಅಂದು ತರಗತಿಯಲ್ಲಿ ನಿಮ್ಮನ್ನು ಗದರಿದಾಗ, ಬೈದಾಗ ನಿಮ್ಮ ಒಳಿತಿಗಾಗಿಯೇ ಆ ರೀತಿ ಮಾಡಿದ್ದೆವು ಎಂಬುದನ್ನು ನೀವು ಮರೆಯದೇ, ಇವತ್ತು ಅದೇ ಗುರುಗಳನ್ನು ಪ್ರೀತಿಯಿಂದ ಕರೆದು ಸನ್ಮಾನಿಸಿ ಗೌರವಿಸಿದ್ದೀರಿ. ನಿಮ್ಮ ಈ ಭಾವನೆ ನಮ್ಮ ಜವಾಬ್ದಾರಿಯನ್ನು ಇನ್ನಷ್ಟು ಹೆಚ್ಚಿಸಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಎಸ್. ಆರ್. ಇ. ಸಂಸ್ಥೆಯ ಚೇರಮನ್ ಆದ ಶ್ರೀ ಬಸಗೌಡ ಶಿ. ಪಾಟೀಲ ಅವರು ಮಾತನಾಡಿ, ವಿದ್ಯಾರ್ಥಿಗಳು ತಾವು ಕಲಿತ ಶಾಲೆಯನ್ನು ಮತ್ತು ಸಂಸ್ಕಾರ ನೀಡಿದ ಗುರುಗಳನ್ನು ನೆನಪಿನಲ್ಲಿಟ್ಟುಕೊಂಡು ಇಂತಹ ಕಾರ್ಯಕ್ರಮ ಆಯೋಜಿಸಿರುವುದು ಶ್ಲಾಘನೀಯ. ಹಳೆಯ ವಿದ್ಯಾರ್ಥಿಗಳ ಈ ಒಗ್ಗಟ್ಟು ಪ್ರಸ್ತುತ ಕಲಿಯುತ್ತಿರುವ ವಿದ್ಯಾರ್ಥಿಗಳಿಗೆ ಮಾದರಿಯಾಗಿದೆ ಎಂದು ತಿಳಿಸಿದರು.

ಸುಮಾರು ಎರಡು ದಶಕಗಳ ಬಳಿಕ ಒಂದೆಡೆ ಸೇರಿದ ಹಳೆಯ ವಿದ್ಯಾರ್ಥಿಗಳು ತಮ್ಮ ಶಾಲಾ ದಿನಗಳ ನೆನಪುಗಳನ್ನು ಮೆಲುಕು ಹಾಕಿದರು ಮತ್ತು ತಮಗೆ ವಿದ್ಯೆ ಕಲಿಸಿದ ಗುರುಗಳಿಗೆ ಗೌರವಪೂರ್ವಕವಾಗಿ ನಮಿಸಿದರು.

ಕಾರ್ಯಕ್ರಮದಲ್ಲಿ ಶಾಲೆಯ ಅಂದಿನ ಹಾಗೂ ಇಂದಿನ ಶಿಕ್ಷಕರು ಮತ್ತು ಸಿಬ್ಬಂದಿ ವರ್ಗದವರಾದ ಆರ್. ಪಿ. ಬಾಗೋಜಿ, ಎ. ಬಿ. ಉಪ್ಪಿನ, ಶ್ರೀಮತಿ ಎಂ. ಎ. ಹೂಗಾರ, ಶ್ರೀಮತಿ ಎಂ. ಎಂ. ಮಡಿವಾಳರ, ಆರ್. ಪಿ. ಕಂಬಾರ, ದೈಹಿಕ ಶಿಕ್ಷಕ ಬಿ. ಎಂ. ಡಬ್ಬನವರ ಮತ್ತು ಸಿಪಾಯಿ ಎಚ್. ಎಸ್. ನಿರ್ಲಿ ಅವರನ್ನು ಹಳೆಯ ವಿದ್ಯಾರ್ಥಿ ವೃಂದದವರು ಪ್ರೀತಿಪೂರ್ವಕವಾಗಿ ಸತ್ಕರಿಸಿ, ಆಶೀರ್ವಾದ ಪಡೆದರು.

ಕಾರ್ಯಕ್ರಮದಲ್ಲಿ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಎ.ಆರ್. ಪಾಟೀಲ, ಹಳೆ ವಿದ್ಯಾರ್ಥಿಗಳಾದ ಶಿವಾನಂದ ಕಮತಿ, ಶ್ರೀಧರ ಪಾಲಬಾಂವಿ, ವಿಠ್ಠಲ ಹುದ್ದಾರ, ಮಂಜುನಾಥ ಗೊರಗುದ್ದಿ, ರುಕ್ಮಿಣಿ ಅಮ್ಮಣಗಿ, ಉಮಾ ಪೂಜಾರಿ, ಮಂಜುಳಾ ಅರಬಾಂವಿ ಮುಂತಾದವರು ಉಪಸ್ಥಿತರಿದ್ದರು.

ಸಾವಿತ್ರಿ ಕೋಳಿ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ರಮೇಶ ಹೆಬ್ಬಾಳ ಸ್ವಾಗತಿಸಿದರು. ಶಿವಾನಂದ ಕಡಲಗಿ ಪ್ರಾಸ್ತಾವಿಕ ಮಾತುಗಳನ್ನಾಡಿದರು. ಪ್ರೊ. ಡಿ.ಎಸ್. ಹುಗ್ಗಿ ನಿರೂಪಿಸಿದರು. ಮಾರುತಿ ಮರಡಿ ವಂದಿಸಿದರು.

## ಅಡಿವೆಪ್ಪ ದೊಡಮನಿ ಅವರಿಗೆ ವಲಯ ಅರಣ್ಯಾಧಿಕಾರಿ ಹುದ್ದೆಗೆ ಪದೋನ್ನತಿ: ಗ್ರಾಮಸ್ಥರಿಂದ ಸನ್ಮಾನ

**ಬೆಳಗಾವಿ ವಾರ್ತೆ ಅಥಣಿ:** ತಾಲೂಕಿನ ನದಿ ಇಂಗಳಗಾಂವ ಗ್ರಾಮದ ಹೆಮ್ಮೆಯ ಪುತ್ರ ಅಡಿವೆಪ್ಪ ದೊಡಮನಿ ಅವರು ಉಪ ವಲಯ ಅರಣ್ಯಾಧಿಕಾರಿ ಹುದ್ದೆಯಿಂದ ವಲಯ ಅರಣ್ಯಾಧಿಕಾರಿ ಹುದ್ದೆಗೆ ಪದೋನ್ನತಿ ಹೊಂದಿದ್ದಾರೆ ಈ ಹಿನ್ನೆಲೆಯಲ್ಲಿ ಗ್ರಾಮಸ್ಥರು ಅವರನ್ನು ಸನ್ಮಾನಿಸಿ ಅಭಿನಂದನೆ ಸಲ್ಲಿಸಿದರು

ಅರಣ್ಯ ಇಲಾಖೆಯಲ್ಲಿ ಪ್ರಾಮಾಣಿಕತೆ ಹಾಗೂ ಕರ್ತವ್ಯನಿಷ್ಠೆಯಿಂದ ಸೇವೆ ಸಲ್ಲಿಸಿದ ದೊಡಮನಿ ಅವರ ಪದೋನ್ನತಿಯು ಇಡೀ ಗ್ರಾಮಕ್ಕೆ ಹೆಮ್ಮೆ ತಂದಿದೆ ಸದ್ಯ ಅವರು ಉತ್ತರ ಕನ್ನಡ ಜಿಲ್ಲೆಯ ಹಳಿಯಾಳದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಅವರ ಸಾಧನೆಗೆ ಗ್ರಾಮಸ್ಥರು ಸಿಹಿ ಹಂಚಿ ಸಂಭ್ರಮಿಸಿದರು ಹಾಗೂ ಮುಂದಿನ ಸೇವಾವಧಿ ಇನ್ನಷ್ಟು ಯಶಸ್ವಿಯಾಗಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ನೂತನ ವಲಯ ಅರಣ್ಯಾಧಿಕಾರಿ ಅಡಿವೆಪ್ಪ ದೊಡಮನಿ ನನ್ನ ಈ ಸಾಧನೆಗೆ ಗ್ರಾಮಸ್ಥರ ಆಶೀರ್ವಾದ ಹಿರಿಯರ ಮಾರ್ಗದರ್ಶನ ಮತ್ತು ಸ್ನೇಹಿತರ ಸಹಕಾರವೇ ಕಾರಣ ಅರಣ್ಯ ಸಂರಕ್ಷಣೆ ನನ್ನ ಮೊದಲ ಆದ್ಯತೆಯಾಗಿದ್ದು ಜನರ ಸಹಕಾರದೊಂದಿಗೆ ಇನ್ನಷ್ಟು ಉತ್ತಮ ಸೇವೆ ಸಲ್ಲಿಸುತ್ತೇನೆ ಎಂದು ತಿಳಿಸಿದರು.




ಈ ವೇಳೆ ಪತ್ರಕರ್ತರಾದ ವಿಲಾಸ ಕಾಂಬಳೆ, ಗೀರೆಪ್ಪಾ ಕಾಂಬಳೆ, ಮಹಾದೇವಿ ದೊಡಮನಿ, ಕಾವೇರಿ ದೊಡಮನಿ, ಸುನೀತಾ ಕಾಂಬಳೆ ಸೇರಿದಂತೆ ಗ್ರಾಮದ ಗಣ್ಯರು ಹಾಗೂ ಪ್ರಮುಖರು ಉಪಸ್ಥಿತರಿದ್ದರು.

## ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರಿಗೆ ಕ್ಯಾಬಿನೆಟ್ ದರ್ಜೆಯ ಸಚಿವ ಸ್ಥಾನ ನೀಡುವಂತೆ ಮನವಿ



ಗೋಕಾಕ: ಪತ್ರಿಕಾಗೋಷ್ಠಿಯಲ್ಲಿ ಪಾಲ್ಗೊಂಡ ಸಮಾಜ ಮುಖಂಡರು.

**ಬೆಳಗಾವಿ ವಾರ್ತೆ ಗೋಕಾಕ:** ಕಾಂಗ್ರೆಸ್ ಪಕ್ಷದಲ್ಲಿನ ಕ್ಷಿಪ್ರ ರಾಜಕೀಯ ಬೆಳವಣಿಗೆಗಳಿಂದಾಗಿ ನೂತನ ಮುಖ್ಯಮಂತ್ರಿಗಳ ನೇತೃತ್ವದಲ್ಲಿ ಸಂಘಟಿತಗೊಳ್ಳಲಿರುವ ನೂತನ ಸಚಿವ ಸಂಪುಟದಲ್ಲಿ ಕ್ಯಾಬಿನೆಟ್ ದರ್ಜೆಯ ಸಚಿವ ಸ್ಥಾನವನ್ನು ಭಗೀರಥ ಉಪ್ಪಾರ ಸಮಾಜದ ರಾಜ್ಯಾಧ್ಯಕ್ಷ, ಎಂ.ಎಸ್.ಐ.ಎಲ್. ಅಧ್ಯಕ್ಷರೂ ಆಗಿರುವ ಚಾಮರಾಜನಗರ ಕ್ಷೇತ್ರದ ಕಾಂಗ್ರೆಸ್ ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರಿಗೆ ನೀಡುವಂತೆ ಕರ್ನಾಟಕ ರಾಜ್ಯ ಉಪ್ಪಾರ ನಿಗಮದ ಅಧ್ಯಕ್ಷ ಭರಮಣ್ಣ ಉಪ್ಪಾರ ಅವರು ಕರ್ನಾಟಕ ಪ್ರದೇಶ ಕಾಂಗ್ರೆಸ್ ಪಕ್ಷವನ್ನು ಮನವಿ ಮಾಡಿದ್ದಾರೆ.

ಗುರುವಾರ ಇಲ್ಲಿನ ಪ್ರವಾಸಿ ಮಂದಿರದಲ್ಲಿ ಕರೆದಿದ್ದ ಪತ್ರಿಕಾ ಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಉಪ್ಪಾರ ಸಮಾಜಕ್ಕೆ ಸೂಕ್ತ ಮೀಸಲಾತಿ ಒದಗಿಸುವುದು, ಆರ್ಥಿಕ ಮತ್ತು ಶೈಕ್ಷಣಿಕ ರಂಗಗಳಲ್ಲಿ ಹಿಂದುಳಿದಿರುವ ಉಪ್ಪಾರ ಸಮಾಜದ ಶ್ರೇಯಸ್ಸಿಗಾಗಿ ಸರ್ಕಾರದ ಮಟ್ಟದಲ್ಲಿ ಜವಾಬ್ದಾರಿಯುತ ಕಾರ್ಯ ನಿರ್ವಹಿಸಲು ಶಾಸಕ ಸಿ.ಪುಟ್ಟರಂಗಶೆಟ್ಟಿ ಅವರಿಗೆ ಕಾಂಗ್ರೆಸ್ ಸರ್ಕಾರದ ನೂತನ ಸಚಿವ ಸಂಪುಟದಲ್ಲಿ ಕ್ಯಾಬಿನೆಟ್ ದರ್ಜೆಯ ಸಚಿವ ಸ್ಥಾನ ಒದಗಿಸಬೇಕಾದ ಅವಶ್ಯಕತೆ ಇದೆ ಎಂದರು.

ಪತ್ರಿಕಾ ಗೋಷ್ಠಿಯನ್ನು ಉದ್ದೇಶಿಸಿ ಉಪ್ಪಾರ ಸಮಾಜದ ಜಿಲ್ಲಾಧ್ಯಕ್ಷ ಜಿ.ಎಸ್.ಉಪ್ಪಾರ ಮತ್ತು ತಾಲ್ಲೂಕು ಘಟಕ ಅಧ್ಯಕ್ಷ ಶಿವಪುತ್ರಪ್ಪ ಜಕಬಾಳ ಹಾಗೂ ಮುಖಂಡ ಬಸವರಾಜ ಖಾನಪ್ಪನವರ ಮಾತನಾಡಿ, ರಾಜ್ಯಾದ್ಯಂತ ಸುಮಾರು 30-35 ವಿಧಾನಸಭಾ ಕ್ಷೇತ್ರಗಳಲ್ಲಿ ಅತ್ಯಂತ ಪ್ರಾಭಲ್ಯ ಮತದಾರರ ಸಂಖ್ಯೆಯನ್ನು ಹೊಂದಿರುವ ಉಪ್ಪಾರ ಸಮಾಜಕ್ಕೆ ಜನಸಂಖ್ಯೆ ಅನುಪಾತಕ್ಕೆ ಅನುಗುಣವಾಗಿ ಪ್ರಾತಿನಿಧ್ಯ ಒದಗಿಸಲು ಕಾಂಗ್ರೆಸ್, ಬಿಜೆಪಿ ಮತ್ತು ಜೆಡಿಎಸ್ ಮೊದಲಾದ ರಾಜಕೀಯ ಪಕ್ಷಗಳು ಆದ್ಯತೆ ನೀಡುವಂತೆ ಒತ್ತಾಯಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಉಪ್ಪಾರ ಸಮಾಜದ ಗೋಕಾಕ ತಾಲ್ಲೂಕು ಘಟಕದ ಉಪಾಧ್ಯಕ್ಷ ವಕೀಲ ಕುಶಾಲ ಗುಡೆನ್ನವರ, ಮುಖಂಡರಾದ ಮಾಯಪ್ಪ ತಹಶೀಲ್ದಾರ, ರೇವಪ್ಪ ದುರದುಂಡಿ, ಲಕ್ಕಪ್ಪ ನಂದಿ, ಸಿದ್ಧಾರೂಢ ದಾಸಪ್ಪನವರ, ಸೋಮು ತೋಳಿನವರ, ಡಿ.ಪಿ.ಮೇಲ್ಮಟ್ಟಿ, ನಿಂಗಪ್ಪ ಬ್ಯಾಗಿ, ಸಂಜೀವ ಸನದಿ, ಪ್ರಶಾಂತ ಬಿಲಕಾರ ಸೇರಿದಂತೆ ಅನೇಕ ಪ್ರಮುಖರು ಉಪಸ್ಥಿತರಿದ್ದರು.

## ಜಮೀನು ಹಸ್ತಾಂತರ : ಆಕ್ಷೇಪಣೆ ಸಲ್ಲಿಕೆ

**ಬೆಳಗಾವಿ ವಾರ್ತೆ ಬಾಗಲಕೋಟೆ:** ರಬಕವಿ-ಬನಹಟ್ಟಿ ತಾಲೂಕಿನ ಬನಹಟ್ಟಿ ಗ್ರಾಮದ ಸರಕಾರಿ ಮಸಣವಾಟ ಜಮೀನಾದ ಸ.ನಂ.12/1 ರಲ್ಲಿನ 11.14 ಎಕರೆ ವಿಸ್ತೀರ್ಣ ಪೈಕಿ 3.25 ಎಕರೆ ವಿಸ್ತೀರ್ಣದ ಮೇಲೆ ಸಾರ್ವಜನಿಕರ ಹಾಗೂ ಎಲ್ಲ ವ್ಯಕ್ತಿಗಳ ಹಕ್ಕುಗಳು ಕೊನೆಗೊಳ್ಳತಕ್ಕದ್ದೆಂದು ಅಪರ ಜಿಲ್ಲಾಧಿಕಾರಿಗಳು 94ನೇ ನಿಯಮದ 68(1)ನೇ ಪ್ರಕರಣದ ಮೇರೆಗೆ ಅಧಿಸೂಚನೆ ಹೊರಡಿಸಿದ್ದಾರೆ.

ಈ ಅಧಿಸೂಚನೆ ಮೇಲೆ ಸಾರ್ವಜನಿಕರ ಆಕ್ಷೇಪಣೆಗಳು ಇದ್ದಲ್ಲಿ ಲಿಖಿತ ರೂಪದಲ್ಲಿ ಬಾಗಲಕೋಟೆ ಜಿಲ್ಲಾಧಿಕಾರಿಗಳ ಕಚೇರಿಗೆ ಸಲ್ಲಿಸತಕ್ಕದ್ದೆಂದು ಅಧಿಸೂಚನೆಯಲ್ಲಿ ತಿಳಿಸಿದ್ದಾರೆ.

# ಮಾಂಸದ ಅಂಗಡಿಗಳ ಸ್ಥಳಾಂತರಕ್ಕೆ ಆಗ್ರಹ



**ಬೆಳಗಾವಿ ವಾರ್ತೆ ಲಕ್ಷೇಶ್ವರ:** ಪಟ್ಟಣದ ಐತಿಹಾಸಿಕ ಪ್ರಸಿದ್ಧ ಶ್ರೀ ಸೋಮೇಶ್ವರ ದೇವಸ್ಥಾನದ ಹಿಂಬದಿಯಲ್ಲಿರುವ ಎಲ್ಲಾ ಮಾಂಸದ ಅಂಗಡಿಗಳನ್ನು ಸ್ಥಳಾಂತರಿಸುವಂತೆ ಆಗ್ರಹಿಸಿ ಶ್ರೀರಾಮ ಸೇನಾ ಮತ್ತು ಹಿಂದೂ ಕಾರ್ಯಕರ್ತರು ತಹಶೀಲ್ದಾರ್ ಕಚೇರಿಗೆ ತೆರಳಿ ಮನವಿ ಸಲ್ಲಿಸಿದರು.

ಮನವಿ ಪತ್ರದಲ್ಲಿ ಶ್ರೀ ಸೋಮೇಶ್ವರ ದೇವಸ್ಥಾನಕ್ಕೆ ಪ್ರತಿನಿತ್ಯ ಸಾವಿರಾರು ಭಕ್ತರು ಬರುತ್ತಿದ್ದು ದೇವಸ್ಥಾನದ ಹಿಂಬದಿಯಲ್ಲಿ ಮೀನು ಚಿಕನ್ನು ಮತ್ತು ಮಾಂಸ ಮಾರಾಟದ ಅಂಗಡಿಗಳು ಇದ್ದು ಇದು ಹಿಂದುಗಳ ಭಾವನೆಗೆ ಧಕ್ಕೆ ತರುವಂತಿದೆ.

ಈ ಅಂಗಡಿಗಳನ್ನು ಸ್ಥಳಾಂತರಿಸುವಂತೆ ಅನೇಕ ಬಾರಿ ಜಿಲ್ಲಾಧಿಕಾರಿಗಳಿಗೆ ಸ್ಥಳೀಯ ಪುರಸಭೆ ಅವರಿಗೆ ಮನವಿಗಳನ್ನು ಕೊಟ್ಟಿದ್ದರು ಎಲ್ಲರೂ ಕಣ್ಮುಚ್ಚಿ ಕುಳಿತಿದ್ದಾರೆ 15 ದಿನಗಳೊಳಗಾಗಿ ಎಲ್ಲಾ ಅಂಗಡಿಗಳನ್ನು ಸ್ಥಳಾಂತರಿಸದಿದ್ದರೆ ಹಿಂದೂಪರ ಸಂಘಟನೆಗಳು ಉಗ್ರ ಹೋರಾಟಕ್ಕೆ ಇಳಿಯಬೇಕಾಗುತ್ತದೆ ಎಂದು ಎಚ್ಚರಿಸಿದರು.

ಗ್ರೇಡ್ 2 ತಹಸಿಲ್ದಾರ್ ಮಂಜುನಾಥ್ ಅಮಾಸಿಯವರು ಮನವಿ ಪತ್ರ ಸ್ವೀಕರಿಸಿ ಸೂಕ್ತ ಕ್ರಮಕ್ಕೆ ಹಿರಿಯ ಅಧಿಕಾರಿಗಳಿಗೆ ಕಳುಹಿಸುವುದಾಗಿ ಹೇಳಿದರು.

ಈ ಸಂದರ್ಭದಲ್ಲಿ ಶ್ರೀರಾಮ ಸೇನೆಯ ತಾಲೂಕ ಘಟಕದ ಅಧ್ಯಕ್ಷ ಈರಣ್ಣ ಪೂಜಾರ ಗಂಗಾಧರ ಮೆಣಸಿನಕಾಯಿ ದುಂಡೇಶಕೊಟಗಿ ವಿಜಯ ಕುಂಬಾರ್ ಶಕ್ತಿ ಕತ್ತಿ ವಿಶಾಲ್ ಬಟಕುರ್ಕಿ ನವೀನ್ ಹಿರೇಮಠ ಮಹಾಂತೇಶ ರಗಟಿ ಅಮಿತ್ ಗುಡಿಗೇರಿ ಉಳಿವೇಶ್ ಗೌಡ ಪಾಟೀಲ್ ಸಂಗಮೇಶ ಬೆಳವಾಳಕೊಪ್ಪ ಪ್ರಶಾಂತ ಗಾಂಜಿ ಅಕ್ಷಯ್ ಕುಂಶಿ ನಾಗರಾಜ್ ಪಾಟೀಲ್ ಯಶವಂತ ಶಿರಹಟ್ಟಿ ಸೇರಿದಂತೆ ಅನೇಕ ಕಾರ್ಯಕರ್ತರು ಇದ್ದರು.

# ಅಕ್ರಮ ಮರಳು ಸಾಗಾಣಿಕೆ ತಡೆಗೆ ಮನವಿ




**ಬೆಳಗಾವಿ ವಾರ್ತೆ ಲಕ್ಷ್ಮೇಶ್ವರ:** ತಾಲೂಕಿನ ಅಕ್ಕಿಗುಂದ ಬಟ್ಟೂರು ಅಮರಾಪುರ ಹುಲ್ಲೂರು , ಹಿರೇಮಲ್ಲಾಪುರ ಬಡ್ನಿ ಆದರಹಳ್ಳಿ ನೆಲಗಲ್ಲು ಮಾಡಳ್ಳಿ ಸೇರಿದಂತೆ ಅನೇಕ ಕಡೆ ಅಕ್ರಮ ಮರಳುಗಾರಿಕೆ ಮತ್ತು ಸಾಗಾಣಿಕೆ ನಡೆದಿದ್ದು ತಡೆಗಟ್ಟುವಂತೆ ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಬಳಗದ ಜಿಲ್ಲಾ ಘಟಕದ ಅಧ್ಯಕ್ಷ ಶರಣು ಗುಡಿ ತಾಲೂಕ ಘಟಕದ ಅಧ್ಯಕ್ಷ ನಾಗೇಶ ಅಮರಾಪುರ ಅವರ ನೇತೃತ್ವದಲ್ಲಿ ಬುಧವಾರ ತಹಶೀಲ್ದಾರರಿಗೆ ಜಿಲ್ಲಾಧಿಕಾರಿಗಳಿಗೆ ಬರೆದ ಮನವಿ ಪತ್ರವನ್ನು ಸಲ್ಲಿಸಲಾಯಿತು.

ಮನವಿ ಪತ್ರದಲ್ಲಿ ಅಕ್ರಮ ಮರಳುಗಾರಿಕೆಯಲ್ಲಿ ತೊಡಗಿರುವವರು ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿ ಹಾನಿ ಮಾಡಿ ರಾಜಸ್ವವನ್ನು ಸಲ್ಲಿಸದೆ ಒಂದೇ ಪಾತ್ರ ಪಡೆದು ನಾಲ್ಕೈದು ಟ್ರಿಪು ಸಾಗಾಣಿಕೆ ಮತ್ತು ಬೇರೆ ತಾಲೂಕಿನ ಪಾಸ್‌ಗಳನ್ನು ದುರುಪಯೋಗಪಡಿಸಿಕೊಂಡು ಅಕ್ರಮ ದಂಧೆಯಲ್ಲಿ ತೊಡಗಿದ್ದಾರೆ.

ಟಾಸ್ಕ್ ಫೋರ್ಸ್ ಸಮಿತಿಯವರಾಗಲಿ ಸಂಬಂಧಪಟ್ಟ ಅಧಿಕಾರಿಗಳಾಗಲಿ ಯಾರೊಬ್ಬರೂ ಈ ಅಕ್ರಮ ಮರಳು ಸಾಗಾಣಿಕೆಯನ್ನು ತಡೆಗಟ್ಟಲು ಆಸಕ್ತಿ ತೋರುತ್ತಿಲ್ಲ ಕಣ್ಣಿದ್ದು ಕುರುಡರಂತೆ ವರ್ತಿಸುತ್ತಿದ್ದಾರೆ ಎಂದು ಆರೋಪಿಸಿದರು.

ಮನವಿ ಪತ್ರವನ್ನು ಸ್ವೀಕರಿಸಿದ ಗ್ರೇಡ್ _2 ತಹಸಿಲ್ದಾರ್ ಮಂಜುನಾಥ ಅಮಾಸಿಯವರು ಹಿರಿಯ ಅಧಿಕಾರಿ ಗಮನಕ್ಕೆ ತರುವುದಾಗಿ ಹೇಳಿದರು.

ಮಹಾಂತೇಶ ಮಣಕವಾಡ ಪ್ರವೀಣ ಆಚಾರಿ ಮಾಂತೇಶ ಉಮಚಗಿ ಕೈಸರ್ ಮೊಹಮ್ಮದ್ ಅಲಿ ಸುಲೇಮಾನ್ ಆಡೂರ್ ಮಲ್ಲಿಕ್ ಕಡಕೋಳ ಬಸವರಾಜ ಅಮರಾಪುರ ರಾಜು ಅಮರಾಪುರ ಅಯ್ಯಪ್ಪ ಪಾಟೀಲ್ ಅಶೋಕ್ ಕುರಿ ಖಾದರ್ ಸಾಬ್ ಶಿರಹಟ್ಟಿ ಜಲಾನಿ ಸಿದ್ದಿ ಇದ್ದರು.

# ಡೆಂಗೀ ಹಾಗೂ ಇತರೆ ಕೀಟಜನ್ಯ ರೋಗಗಳು ಬಾರದಂತೆ ಮುನ್ನೆಚ್ಚರಿಕೆ ಕ್ರಮ ವಹಿಸಿ

**ಬೆಳಗಾವಿ ವಾರ್ತೆ ಗದಗ:** ಜಿಲ್ಲೆಯಲ್ಲಿ ಡೆಂಗೀ ಹಾಗೂ ಇತರೆ ಕೀಟಜನ್ಯ ರೋಗಗಳು ಹರಡದಂತೆ ಮುಂಜಾಗ್ರತಾ ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಸಭಾಂಗಣದಲ್ಲಿ ರಾಷ್ಟ್ರೀಯ ಡೆಂಗೀ ದಿನ ಮತ್ತು ಜಿಲ್ಲಾ ಮಟ್ಟದ ಅಂತರ ಇಲಾಖಾ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಜಿಲ್ಲೆಯಲ್ಲಿ ಮಲೇರಿಯಾ, ಡೆಂಗ್ಯೂ, ಚುಕ್ಯುನ್ ಗುನ್ಯಾ ರೋಗಗಳು ಹರಡದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಈ ನಿಟ್ಟಿನಲ್ಲಿ ಆರೋಗ್ಯ ಇಲಾಖೆಯವರು ವಿವಿಧ ಇಲಾಖೆಯ ಸಮನ್ವಯತೆಯೊಂದಿಗೆ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸ್ವಚ್ಚತೆಯ ಕುರಿತು ಅರಿವು ಮೂಡಿಸಬೇಕು ಎಂದರು.

ಸಾರ್ವಜನಿಕ ನಲ್ಲಿಗಳು ಹಾಗೂ ಕೊಳವೆ ಬಾವಿಗಳಿರುವ ಪ್ರದೇಶಗಳಲ್ಲಿ ನೀರು ಸರಾಗವಾಗಿ ಹರಿದು ಹೋಗುವಂತೆ ಸೂಕ್ತ ವ್ಯವಸ್ಥೆ ಮಾಡಿರುವ ಕುರಿತು ಪರಿಶೀಲನೆ ನಡೆಸಬೇಕು. ಸೊಳ್ಳೆ ನಾಶಕ ದ್ರಾವಣವನ್ನು ಸೊಳ್ಳೆ ಉತ್ಪತ್ತಿಯಾಗುತ್ತಿರುವ ಸ್ಥಳದಲ್ಲಿ ಸಿಂಪಡಿಸಲು ಕ್ರಮ ಕೈಗೊಳ್ಳಬೇಕು. ಶಾಲೆಗಳಲ್ಲಿ ಆರೋಗ್ಯ ಶಿಕ್ಷಣ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು. ಬಸ್ ಡಿಪೋಗಳಲ್ಲಿ ಖಾಲಿ ಟಾಯರ್‌ಗಳಲ್ಲಿ ಹಾಗೂ ಘನ ತ್ಯಾಜ್ಯಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು. ಖಾಲಿ ಟಾಯರ್ ಮೇಲೆ ಟಾರ್ಪಾಲನ್ನು ಹಾಕಿ ತಕ್ಷಣ ವಿಲೇವಾರಿಗೆ ಕ್ರಮ ವಹಿಸಬೇಕು. ಸಾಂಕ್ರಾಮಿಕ ರೋಗಗಳ ನಿಯಂತ್ರಣ ಹಾಗೂ ಸ್ವಚ್ಛತೆಯ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ತಿಳಿಸಿದರು.



ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಠೋಡ ಅವರು ಮಾತನಾಡಿ ಜಿಲ್ಲೆಯಲ್ಲಿ ಮಲೇರಿಯಾ ಪ್ರಕರಣಗಳಿಗೆ ಸಂಬಂಧಿಸಿದಂತೆ 2026 ಜನವರಿಯಿಂದ ಏಪ್ರಿಲ್ ವರೆಗೆ 120029 ರಕ್ತ ಲೇಪನ ಪರೀಕ್ಷೆಗಳನ್ನು ಕೈಗೊಳ್ಳಲಾಗಿದ್ದು 2 ಮಲೇರಿಯಾ ಪ್ರಕರಣಗಳು ಖಚಿತಪಟ್ಟಿವೆ. ಡೆಂಗೀ ಪ್ರಕರಣಗಳಿಗೆ ಸಂಬಂಧಿಸಿದಂತೆ 2026 ಜನವರಿಯಿಂದ ಏಪ್ರಿಲ್‌ವರೆಗೆ 607 ರಕ್ತದ ಮಾದರಿಗಳನ್ನು ಪರೀಕ್ಷಿಸಲಾಗಿದ್ದು 17 ಡೆಂಗೀ ಪ್ರಕರಣಗಳು ಖಚಿತಪಟ್ಟಿವೆ. ಚಿಕೂನ್ ಗುನ್ಯಾ ಪ್ರಕರಣಗಳಿಗೆ ಸಂಬಂಧಿಸಿದಂತೆ 2026 ಜನವರೆಯಿಂದ ಏಪ್ರಿಲ್‌ವರೆಗೆ 109 ರಕ್ತದ ಮಾದರಿ ಪರೀಕ್ಷಿಸಲಾಗಿದ್ದು 7 ಚಿಕೂನ್ ಗುನ್ಯಾ ಪ್ರಕರಣಗಳು ಖಚಿಪಟ್ಟಿವೆ ಎಂದರು.

ಶಾಲಾ ಮಕ್ಕಳಿಗೆ ಡೆಂಗೀ ಹಾಗೂ ಕೀಟಜನ್ಯ ರೋಗಗಳ ನಿಯಂತ್ರಣ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಕೈಗೊಳ್ಳಲಾಗಿದೆ. ನಗರ ಹಾಗೂ ಗ್ರಾಮೀಣ ಪ್ರದೇಶಗಳಿಗೆ ತೆರಳಿ ಅಲ್ಲಿನ ಜನರಿಗೆ ಕೀಟಜನ್ಯ ರೋಗಗಳು ಬಾರದಂತೆ ಮುಂಜಾಗ್ರತೆ ವಹಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ತಿಳುವಳಿಕೆ ನೀಡಲಾಗಿದೆ. ಮನೆಗಳ ಮುಂದೆ ನೀರು ನಿಲ್ಲದಂತೆ ನೋಡಿಕೊಳ್ಳುವಂತೆ ಹಾಗೂ ಸ್ವಚ್ಛತೆಯ ಕುರಿತು ಅರಿವು ಮೂಡಿಸಲಾಗಿದೆ. ಕಸ ವಿಲೇವಾರಿ ವಾಹನದ ಮೂಲಕವೂ ಕೀಟಜನ್ಯ ರೋಗಗಳ ನಿಯಂತ್ರಣಕ್ಕಾಗಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಜಾಗೃತಿ ಮೂಡಿಸಲಾಗುತ್ತಿದೆ ಎಂದು ಡಾ.ವೆಂಕಟೇಶ ರಾಠೋಡ ಸಭೆಗೆ ವಿವರಿಸಿದರು.

# ರೈತರ ವಿವಿಧ ಬೇಡಿಕೆ ಈಡೇರಿಕೆಗಾಗಿ ಜಿಲ್ಲಾಧಿಕಾರಿಗೆ ಮನವಿ



**ಬೆಳಗಾವಿ ವಾರ್ತೆ ವಿಜಯಪುರ:** ರಸಗೊಬ್ಬರ ದರ ಕಡಿಮೆ ಮಾಡುವುದು ಕೃಷಿ ಚಟುವಟಿಕೆಗಳಿಗೆ ಡಿಸೇಲ್ ಕೊರತೆಯಾಗದಂತೆ ನೊಡಿಕೊಂಡು ರೈತರಿಗೆ ಅಗತ್ಯವಿರುವಷ್ಟು ಡಿಸೇಲ್ ಅನ್ನು ಒದಗಿಸಲು ಕ್ರಮ ಕೈಗೊಳ್ಳುವುದು ಸೇರಿದಂತೆ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಅಖಂಡ ಕರ್ನಾಟಕ ರೈತ ಸಂಘ ಜಂಟಿಯಾಗಿ ಜಿಲ್ಲಾಧಿಕಾರಿ ಕಛೇರಿ ಆವರಣದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಂಡು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರ ಮುಖಾಂತರ ಪ್ರಧಾನಮಂತ್ರಿ ಹಾಗೂ ರಾಜ್ಯ ಮುಖ್ಯಮಂತ್ರಿಯವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಯುವ ಘಟಕದ ಸಂಚಾಲಕರಾದ ಸಿದ್ಧನಗೌಡ ಜಲಪೂರ ಮಾತನಾಡಿ, ಕೇಂದ್ರ ಸರ್ಕಾರ ಪದೇ ಪದೇ ರೈತರಿಗೆ ಗಾಯದ ಮೇಲೆ ಬರೆ ಎಳೆಯುತ್ತಿದೆ. ಮೊದಲೇ ಬರಗಾಲದಿಂದ ತತ್ತರಿಸಿದ ರೈತರಿಗೆ ಡಿಸೇಲ್ ಮತ್ತು ಪೆಟ್ರೋಲ್ ದರ ಹೆಚ್ಚಿಸುವ ಮೂಲಕ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕುವಂತೆ ಮಾಡಿದೆ. ಇರಾನ್ ಮತ್ತು ಇಸ್ರೇಲ್, ಅಮೇರಿಕಾ ಈ ಮೂರು ದೇಶಗಳ ಮಧ್ಯ ನಡೆಯುತ್ತಿರುವ ಯುದ್ಧದ ಪರಿಣಾಮವನ್ನು ಮುಂದಿಟ್ಟುಕೊಂಡು ತೈಲ್ ಬೆಲೆ ದರ ಹೆಚ್ಚಿಗೆ ಮಾಡಿದ್ದರಿಂದ ಮುಂಗಾರು ಹಂಗಾಮಿನಲ್ಲಿ ಬಿತ್ತನೆ ಮಾಡುವ ಕೃಷಿ ಚಟುವಟಿಕೆ ಕುಂಠಿತಗೊಳ್ಳುತ್ತಿದೆ. ರೈತರ ವಾಹನಗಳಿಗೆ ತೈಲ ಕೊರತೆಯಿಂದ ಒಂದು ಕಡೆ ನಿಲ್ಲುವಂತಾಗಿದೆ. ಆದ್ದರಿಂದ ಕೇಂದ್ರ ಸರ್ಕಾರ ತೈಲ ಬೆಲೆಯನ್ನು ತಕ್ಷಣ ಕಡಿಮೆ ಮಾಡಿ ಯಾವುದೇ ಕಾರಣಕ್ಕೆ ರೈತರಿಗೆ ಡಿಸೇಲ್ ಕೊರತೆಯಾಗದಂತೆ ನೋಡಿಕೊಳ್ಳಬೇಕೆಂದು ಆಗ್ರಹಿಸಿದರು.

ಅಖಂಡ ಕರ್ನಾಟಕ ರೈತ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಅರವಿಂದ ಕುಲಕರ್ಣಿ ಮಾತನಾಡಿ, ಇತ್ತೀಚಿಗೆ ರಸಗೊಬ್ಬರದ ದರವನ್ನು ಕೂಡಾ ದುಪ್ಪಟ್ಟುಮಾಡಿದ್ದು, ಮತ್ತು ಗೊಬ್ಬರ ಖರೀದಿ ಸಂದರ್ಭದಲ್ಲಿ ರೈತರಿಗೆ ಎ???ಐಡಿ ಕಡ್ಡಾಯ ಮಾಡಿದ್ದಲ್ಲದೇ ಪ್ರತಿ ಎಕರೆಗೆ ಒಂದೇ ಚೀಲು ಗೊಬ್ಬರ ಕೊಡುವುದಾಗಿ ಸರ್ಕಾರ ನಿರ್ಣಯ ತಗೆದುಕೊಂಡಿರುವುದು ರೈತರಿಗೆ ತೊಂದರೆಯಾಗುತ್ತಿದೆ ರೈತರಿಗೆ ಹೆಚ್ಚಿಗೆ ಗೊಬ್ಬರ ನೀಡಿದರೆ ಕಾಳ ಸಂತೆಯಲ್ಲಿ ಮಾರಿಕೊಳ್ಳುತ್ತಿದ್ದಾರೆ ಎಂಬ ಕೇಂದ್ರ ಸರ್ಕಾರ ಹೇಳುತ್ತಿದ್ದು, ಇದು ರೈತರಿಗೆ ಅಪಮಾನ ಮಾಡಿದಂತಾಗಿದೆ ಆದ್ದರಿಂದ ಯಾವುದೇ ಮಾನದಂಡವಿಲ್ಲದೇ ರೈತರಿಗೆ ಅಗತ್ಯವಿರುವಷ್ಟು ಗೊಬ್ಬರವನ್ನು ಎ???ಐಡಿ ಇಲ್ಲದೇ ಒದಗಿಸಬೇಕು ಹಾಗೂ ಯರಿಯಾ ಮತ್ತು ಡಿಎಪಿ ಗೊಬ್ಬರ ಖರೀದಿ ಸಂದರ್ಭದಲ್ಲಿ ಬೇರೆ ಬೇರೆ ವಸ್ತುಗಳನುನ ಖರೀದಿಸಲು ಗೊಬ್ಬರ ಅಂಗಡಿಯ ಮಾಲೀಕರು ಲಿಂಕ್ ಮಾಡುತ್ತಾರೆ. ಆದ್ದರಿಂದ ಲಿಂಕ್ ಮಾಡುವ ಪದ್ದತಿ ನಿಲ್ಲಿಸಬೇಕು ಮತ್ತು ಕೇಂದ್ರ ಸರ್ಕಾರ ನಿಗದಿ ಮಾಡಿದ ಗೊಬ್ಬರಗಳ ದರದ ಫಲಕವನ್ನು ಅಂಗಡಿಯ ಮುಂಭಾಗದಲ್ಲಿ ಪ್ರತಿಯೊಬ್ಬ ರೈತನಿಗೂ ಕಾಣುವಂತೆ ಹಾಕಬೇಕು. ಸರ್ಕಾರ ನಿಗದಿ ಮಾಡಿದ ದರಕ್ಕೆ ರೈತರಿಗೆ ಮಾರಾಟ ಮಾಡಬೇಕು. ಗೊಬ್ಬರ ಖರೀದಿ ಮಾಡಿದ ರೈತರಿಗೆ ಕಡ್ಡಾಯವಾಗಿ ಅಧಿಕೃತ ರಸೀದಿಯನ್ನು ಕೊಡಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ವಿಜಯಪುರ ತಾಲೂಕಾಧ್ಯಕ್ಷ ಮಹಾದೇವಪ್ಪ ತೇಲಿ ಮಾತನಾಡಿ, ಬೇಸಿಗೆ ಸಂದರ್ಭದಲ್ಲಿ ಜನ ಹಾಗೂ ಜಾನವಾರುಗಳಿಗೆ ಕುಡಿಯಲು ನೀರಿಲ್ಲದೇ ತೊಂದರೆಯಾಗುತ್ತಿದ್ದು, ವಿಜಯಪುರ ತಾಲೂಕಿನ ಆಹೇರಿ, ಜಂಬಗಿ, ಹುಣಶ್ಯಾಳ, ಅಂಕಲಗಿ, ಅರನಾಳ, ಇಂಗಳಗಿ ಸೇರಿದಂತೆ ಇನ್ನಿತರ ಗ್ರಾಮಗಳಲ್ಲಿ ನೀರಿನ ಕೊರತೆವುಂಟಾಗಿದೆ. ಈಗಾಗಲೇ ಹೋರಾಟದ ಪರಿಣಾಮವಾಗಿ ಮುಳವಾಡ ಹಾಗೂ ಚಿಮ್ಮಲಗಿ ಏತ ನೀರಾವರಿಗಳಿಗೆ ನೀರು ಹರಿಸಲಾಗಿದೆ. ಆದರೆ ನಮ್ಮ ಭಾಗದಲ್ಲಿ ನೀರು ಹರಿಸಿದಾಗ ಎಂದು ಕಾಲುವೆ ಕೊನೆ ಅಂಚಿನವರೆಗೂ ನೀರು ತಲುಪಿರುವುದಿಲ್ಲ. ಇದರಿಂದ ತೃಪ್ತಿಕರವಾಗಿ ರೈತರಿಗೆ ನೀರು ಸಿಗದಂತಾಗಿದೆ. ಕೆರೆಗಳಿಗೂ ಕೂಡಾ ಸುರಕ್ಷಿತವಾಗಿ ನೀರು ತಲುಪುವುದಿಲ್ಲ ಆದ್ದರಿಂದ ಕೂಡಲೇ ನಾಗಠಾಣ ಗ್ರಾಮದ ಮುಖಾಂತರ ಆ ಭಾಗದ ಎಲ್ಲ ಕೆರೆಗಳಿಗೆ ನೀರನ್ನು ಹರಿಸಬೇಕು. ಹಾಗೂ ವಿಜಯಪುರ ತಾಲೂಕಿನಲ್ಲಿರುವ ಬಹುತೇಕ ಕೆರೆಗಳು ಒತ್ತುವರಿಯಾಗಿದ್ದು, ಅವುಗಳನ್ನು ಕೂಡಲೇ ತೆರವುಗೊಳಿಸಿ ಮೂಲ ಕೆರೆ ಅಳತೆ ಗುರುತುಮಾಡಬೇಕೆಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ವಿಭಾಗೀಯ ಉಪಾಧ್ಯಕ್ಷ ಬಸನಗೌಡ ಧರ್ಮಗೊಂಡ, ಅಖಂಡ ಕರ್ನಾಟಕ ರೈತ ಸಂಘದ ಜಿಲ್ಲಾಧ್ಯಕ್ಷ ಉಮೇಶ ವಾಲೀಕಾರ, ಜಿಲ್ಲಾ ಸಂಘಟನ ಕಾರ್ಯದರ್ಶಿ ಗುರುರಾಜ ಪಡಶೆಟ್ಟಿ ಹೊನಕೇರಪ್ಪ ತೆಲಗಿ, ಬಬಲೇಶ್ವರ ತಾಲೂಕಾ ಗೌರವ ಅಧ್ಯಕ್ಷ ಸಿದ್ದಪ್ಪ ಕೋಟ್ಯಾಳ, ಬಬಲೇಶ್ವರ ತಾಲೂಕಾ ತಾಲೂಕಾಧ್ಯಕ್ಷ ಗುರಣಗೌಡ ಬಿರಾದಾರ, ಪ್ರಭುಲಿಂಗ ಕಾರಜೋಳ, ಸಂತೋಷ ಚೌರಿ, ಒಗೆಪ್ಪ ಬಿರಾದಾರ, ಸೋಮಯ್ಯ ನಂದಿಕೋಲ, ಅಮೋಗಿ ಉಕ್ಕಲಿ, ಮಲ್ಲಿಕಾರ್ಜುನ ಬಟಗಿ, ಬೋಗೇಶ ಸೊಲಾಪೂರ, ನೀಲಮ್ಮ ಕಟ್ಟಿಮನಿ, ಲಂಕೆಪ್ಪ ತಳವಾರ, ನಬಿರಸೂಲ ಬಿರಾದಾರ, ಗುರಪ್ಪ ತಳವಾರ, ಅಜೀಜ ಪಾಟೀಲ ಮುಂತಾದ ನೂರಾರು ರೈತರು ಪ್ರತಿಭಟನೆಯಲ್ಲಿ ಇದ್ದರು.

# ಡಾ.ಹಳಕಟ್ಟಿ ಇಂಜನೀಯರಿಂಗ್ ಕಾಲೇಜಗೆ 28 ನೇ ರ್‍ಯಾಂಕ್

**ಬೆಳಗಾವಿ ವಾರ್ತೆ ವಿಜಯಪುರ:** ನಗರದ ಬಿ.ಎಲ್.ಡಿ.ಇ ಸಂಸ್ಥೆಯ ವಚನ ಪಿತಾಮಹ ಡಾ. ಫ. ಗು. ಹಳಕಟ್ಟಿ ಎಂಜಿನಿಯರಿಂಗ್ ಕಾಲೇಜಿಗೆ ದೇಶದ ಅತ್ಯುನ್ನತ 175 ಕಾಲೇಜುಗಳಲ್ಲಿ 28ನೇ ರ್‍ಯಾಂಕ್ ಲಭಿಸಿದೆ.

ನ್ಯಾಷನಲ್ ಟೈಮ್ಸ್ ಎಂಜಿನಿಯರಿಂಗ್ ರ್‍ಯಾಂಕಿಂಗ್ ನಡೆಸಿದ ಸಮೀಕ್ಷೆಯಲ್ಲಿ ಈ ಸ್ಥಾನ ಸಿಕ್ಕಿದೆ. ಈ ಸಂಸ್ಥೆ ದೇಶದ ನಾನಾ ಎಂಜಿನಿಯರಿಂಗ್ ಕಾಲೇಜುಗಳ ಸಮೀಕ್ಷೆ ನಡೆಸಿದ್ದು, ಬಿ.ಎಲ್.ಡಿ.ಇ ಎಂಜಿನಿಯರಿಂಗ್ ಕಾಲೇಜು ನಾನಾ ವಿಭಾಗಗಳಲ್ಲಿ ಅತ್ಯುತ್ತಮ ಸಾಧನೆ ಮಾಡುವ ಮೂಲಕ ಗಮನ ಸೆಳೆದಿದೆ.

ಕಾಲೇಜಿನ ವಿದ್ಯಾರ್ಥಿಗಳಿಗೆ ಉದ್ಯೋಗ ವ್ಯವಸ್ಥೆ ಮಾಡುವಲ್ಲಿ ದೇಶದ ಉನ್ನತ 70 ಖಾಸಗಿ ಕಾಲೇಜುಗಳ ಪೈಕಿ ಬಿ.ಎಲ್.ಡಿ.ಇ ಎಂಜಿನಿಯರಿಂಗ್ ಕಾಲೇಜಿಗೆ 43ನೇ ರ್‍ಯಾಂಕ್ ಬಂದಿದೆ.

ಅದೇ ರೀತಿ ದೇಶದ 125 ಖಾಸಗಿ ಎಂಜಿನಿಯರಿಂಗ್ ಕಾಲೇಜುಗಳಲ್ಲಿ 27ನೇ ರ್‍ಯಾಂಕ್ ಬಂದಿದ್ದರೆ, ದಕ್ಷಿಣ ಭಾರತದ ಅತ್ಯುತ್ತಮ 25 ಎಂಜಿನಿಯರಿಂಗ್ ಕಾಲೇಜುಗಳಲ್ಲಿ 15ನೇ ಸ್ಥಾನ ಲಭಿಸಿದೆ.



ಕಾಲೇಜಿನ ಈ ಸಾಧನೆಗೆ ಬಿ.ಎಲ್.ಡಿ.ಇ ಸಂಸ್ಥೆಯ ಅಧ್ಯಕ್ಷ ಮತ್ತು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ, ಸಂಸ್ಥೆಯ ಪ್ರಧಾನ ಕಾರ್ಯದರ್ಶಿ ಮತ್ತು ವಿಧಾನ ಪರಿಷತ ಶಾಸಕ ಸುನೀಲಗೌಡ ಪಾಟೀಲ ಸಂತಸ ವ್ಯಕ್ತಪಡಿಸಿದ್ದು, ಕಾಲೇಜಿನ ಎಲ್ಲ ಆಡಳಿತ ಮಂಡಳಿ, ಬೋಧಕ ಮತ್ತು ಬೋಧಕರ ಹೊರತಾದ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸಿದ್ದಾರೆ ಎಂದು ಕಾಲೇಜಿನ ಪ್ರಾಚಾರ್ಯ ಡಾ. ಪಿ. ಮಂಜುನಾಥ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಕ್ರೀದ ತ್ಯಾಗದ ಸಂಕೇತ:ಮೌಲಾನಾ ಫೈಸಲ ಸಕಾಪ ಖಾದ್ರಿಸಾದತ

**ಬೆಳಗಾವಿ ವಾರ್ತೆ ವಿಜಯಪುರ:** ಬಕ್ರೀದ ಹಬ್ಬ ತ್ಯಾಗ ಮತ್ತು ಬಲಿದಾನದ ಸಂಕೇತವಾಗಿದೆ. ಇಬ್ರಾಹಿಂ ಅಲೆ ಸಲಾಮರವರ ಪ್ರೀತಿಯ ಮಗನಾದ ಇಸ್ಮಾಯಿಲ್ ಇವರನ್ನು ದೇವರ ವಾಣಿಯಂತೆ ಬಲಿದಾನ ತೆಗೆದುಕೊಳ್ಳುವಾಗ ನಡೆದ ಘಟನೆ ಬಕ್ರೀದ ಹಬ್ಬದ ಪ್ರತೀಕವಾಗಿದೆ.

ಇಂದು ವಿಜಯಪುರ ನಗರದ ಪವಿತ್ರ ಆಸಾರ ಮಹಲ ಶರೀಪದಲ್ಲಿ ನಡೆದ ಬಕ್ರೀದ ಹಬ್ಬದ ಪ್ರಾರ್ಥನೆಯಲ್ಲಿ ಆಶೀರ್ವಚನ ನೀಡುತ್ತ ಒಡಹುಟ್ಟಿದ ಮಗ ಇಸ್ಮಾಯಿಲನನ್ನು ತಂದೆಯಾದ ಇಬ್ರಾಹಿಂ ಅಲೆ ಸಲಾಮರವರು ದೇವರಿಗೆ ಸಮರ್ಪಣೆ ಮಾಡಲು ಮಗನ ಕುತ್ತಿಗೆಯ ಮೇಲೆ ಅಸ್ತ್ರವನ್ನಿಟ್ಟು ಬಲಿದಾನ ಮಾಡುವಾಗ ದೇವರ ಕೃಪೆಯಂತೆ ಅಸ್ತ್ರ ನಡೆಯದೆ ಒಂದು ಪವಾಡವಾಗಿ ಪ್ರಾಣಿಯ ಬಲಿದಾನವಾಗಿದ್ದು ಇತಿಹಾಸದಲ್ಲಿ ಬರೆಯಲ್ಪಡುತ್ತದೆ. ದೇವರ ಮಕ್ಕಳಾದ ನಾವುಗಳು ದೇವಭಯ ಹೊಂದಿರಬೇಕು. ನಾವೆಲ್ಲರೂ ದೇವರ ಕೃಪೆಯಿಂದ ಬದುಕಿ ಬಾಳುತ್ತಿದ್ದೇವೆ. ನಮ್ಮೆಲ್ಲರ ಕರ್ಮಗಳನ್ನು ದೇವನೊಬ್ಬ ಗಮನಿಸುತ್ತಿದ್ದಾನೆ. ದೇವರ ಮನೆಯಿದು. ಬಾಡಿಗೆದಾರರು ನಾವುಗಳೆಲ್ಲ




ಎಂಬ ಮಾತಿನಂತೆ ವಸು ದೇವ ಕುಟುಂಬಕಂ ಎಂಬ ವಿಚಾರದಲ್ಲಿ ನಂಬಿಕೆಯಿಟ್ಟು ಬದುಕಬೇಕಾಗಿದೆ.

ಎಲ್ಲ ಧರ್ಮಗಳು ಮಾನವ ಕುಲಕೋಟಿಗೆ ಸನ್ಮಾರ್ಗ ತೋರಿಸಿವೆ. ಅಸೂಯೆ ಮತ್ತು ದ್ವೇಷದಿಂದ ದೂರವಿದ್ದು ಪ್ರೀತಿ, ಮಮತೆ, ಸೌಹಾರ್ದತೆ ಸ್ಥಾಪನೆ ಮಾಡಬೇಕು. ಬಹುಭಾಷಿಕರ ದೇಶ ಭಾರತ ಬಹು ಧರ್ಮಿಯರ ದೇಶ ಭಾರತ, ಬಹು ಸಂಸ್ಕೃತಿಯ ದೇಶ ಭಾರತ ಎಲ್ಲ ಸಂಸ್ಕೃತಿ ಭಾಷೆ, ಧರ್ಮ ಗೌರವಿಸಬೇಕು. ಯುವಕರು ಜ್ಞಾನ ಸಂಪಾದನೆಗೆ ಪ್ರಾಧ್ಯಾನತೆ ನೀಡಬೇಕು. ಕುಟುಂಬದ ಪಾಲಕರ ಪೋಷಣೆ ಸಾಗಬೇಕು. ಆರ್ಥಿಕ ಸಬಲೀಕರಣದಲ್ಲಿ ನಂಬಿಕೆ ಇಡಬೇಕು ಎಂದು ತಮ್ಮ ಆಶೀರ್ವಚನದಲ್ಲಿ ಹೇಳಿದರು.

ಈ ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಹಾಸಿಂಪೀರ ವಾಲಿಕಾರ, ಸೈಯ್ಯದ ಅಮೀದ ತಕಾಪಸಾದಾತ, ಸೈಯ್ಯದ ಮುಸ್ತಾಫಾಖಾದ್ರಿ ಸಾದಾತ, ಜಮೀರಅಹ್ಮದ ಬಾಗಲಕೋಟ, ಪಾಪಾ ಪೀರಜಾದೆ, ಹಾಸಿಂಪೀರ ಇನಾಮದಾರ, ಜಾವಿದ ಕಿಲ್ಲೇದಾರ ಮುಂತಾದವರು ಉಪಸ್ಥಿತರಿದ್ದರು.

# ಶ್ರೀ ಕೃಷ್ಣ ಪಾರಿಜಾತ ಹಾಗೂ ಭಜನಾ ಕಾರ್ಯಕ್ರಮ




**ಬೆಳಗಾವಿ ವಾರ್ತೆ ಗೋಕಾಕ್:** ಬಗರನಾಳ ಗ್ರಾಮದಲ್ಲಿ ಶ್ರೀ ಗ್ರಾಮದೇವಿ ದ್ಯಾಮಮ್ಮ ದೇವಿ ಜಾತ್ರಾ ನಿಮಿತ್ಯವಾಗಿ ಶ್ರೀ ವೀರಭದ್ರೇಶ್ವರ ಜಾನ ಪದ ರಂಗ ಕಲಾವಿದರ ಸಂಘ ಧರ್ಮಟ್ಟಿ ಅವರ ಆಶ್ರಯದಲ್ಲಿ ಶ್ರೀ ಕೃಷ್ಣ ಪಾರಿಜಾತ ಹಾಗೂ ಭಜನಾ ಕಾರ್ಯಕ್ರಮ ಜರುಗಿದವು ಕಾರ್ಯಕ್ರಮದ ಉದ್ಘಾಟನೆ ಯನ್ನು ಹಿರಿಯ ಬಯಲಾಟ ಕಲಾವಿದ ರಾದ ಪರಸಪ್ಪ ತುಕ್ಕಾನಟ್ಟಿ ಉದ್ಘಾಟಿಸಿ ದರು ಮುಖ್ಯ ಅತಿಥಿಗಳಾಗಿ ಹನುಮಂತ ಹವಾಡಿ ಪ್ರಕಾಶ್ ಕುರುಬೀಟ್ ಸುಭಾಷ್ ಹವಾಡಿ ಶಂಕರ್ ತೋಟಗಿ ಬಸನಗೌಡ ಪಾಟೀಲ್ ಯಮನಪ್ಪ ಹವಾಡಿ ರಮೇಶ್ ಕಾಲ್ಗಾರ್ ಬಾಳಪ್ಪ ಬಡಿಗೇರ್ ಈರಪ್ಪ ವಿಭೂತಿ ಕಾರ್ಯಕ್ರಮದ ನೇತೃತ್ವವನ್ನು ಮಲ್ಲಿಕಾರ್ಜುನ್ ರಾ ಕುಂಬಾರ್ ಅಧ್ಯಕ್ಷರು ಶ್ರೀ ವೀರಭದ್ರೇಶ್ವರ ಜಾನಪದ ರಂಗ ಕಲಾವಿದರ ಸಂಘ ಧರ್ಮಟ್ಟಿ ನೇತೃತ್ವ ವಹಿಸಿ ಮಾತನಾಡಿ ಇಂದಿನ ದಿನಮಾನಗಳಲ್ಲಿ ಗ್ರಾಮೀಣ ಭಾಗದ ಬೈಲಾಟ ಹಾಗೂ ಸಣ್ಣಾಟಗಳು ಟಿವಿ ಹಾಗೂ ಮೊಬೈಲ್ ಮಾಧ್ಯಮಗಳಲ್ಲಿ ಸಿಲುಕಿ ನಶಿಸುವ ಹಂತದಲ್ಲಿದ್ದು ಸರ್ಕಾರ ಇದರ ಕಡೆ ಗಮನ ಹರಿಸಿ ಕಲಾವಿದರಿಗೆ ಇನ್ನಷ್ಟು ವೇದಿಕೆಯನ್ನು ನೀಡಬೇಕೆಂದು ನುಡಿದರು ಕಾರ್ಯಕ್ರಮದ ನಿರೂಪಣೆ ಯನ್ನು ಮೋಹನ್ ಮುದರಂಗಿ ನಿರೂಪಿ ಸಿದರು ಶ್ರೀ ಪುರುಷೋತ್ತಮ್ ಚಿತ್ತೂರ್ ವಂದಿಸಿದರು ನಂತರ ನಡೆದ ಶ್ರೀ ರೇಣು ಕಾದೇವಿ ಕೃಷ್ಣ ಪಾರಿಜಾತ ಕಲಾಸಂಘ ಕುಳ್ಳೂರ ವರಿಂದ ಕೃಷ್ಣ ಪಾರಿಜಾತ & ಬಜನಾಪದ ಕಾರ್ಯಕ್ರಮ ಜರಗಿತು.

# ತ್ಯಾಗ ಮತ್ತು ಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬವನ್ನು ಮುಸ್ಲಿಂ ಬಾಂಧವರಿಂದ ಆಚರಣೆ

**ಬೆಳಗಾವಿ ವಾರ್ತೆ ಗೋಕಾಕ:** ತ್ಯಾಗ ಮತ್ತು ಬಲಿದಾನದ ಸಂಕೇತವಾದ ಬಕ್ರೀದ್ ಹಬ್ಬವನ್ನು ಮುಸ್ಲಿಂ ಬಾಂಧವರು ನಗರದಲ್ಲಿ ಶ್ರದ್ಧಾ-ಭಕ್ತಿಯಿಂದ ಆಚರಿಸಿದರು.

ನಗರದ ಈದ್ಗಾ ಮೈದಾನದಲ್ಲಿ ಗುರುವಾರದಂದು ಬೆಳಿಗ್ಗೆ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿ, ಸಕಲ ಜೀವರಾಶಿಗೆ ಒಳಿತಾಗುವಂತೆ ದೇವರಲ್ಲಿ ಪ್ರಾರ್ಥಿಸಿದರು.

ಹಬ್ಬದ ಅಂಗವಾಗಿ ಶ್ವೇತವಸ್ತ್ರ ಧರಿಸಿ, ರಂಗು ರಂಗಿನ ಟೋಪಿಗಳನ್ನು ತೊಟ್ಟು ಪ್ರಾರ್ಥನೆಗೆ ಈದ್ಗಾ ಮೈದಾನಕ್ಕೆ ಆಗಮಿಸಿದರು. ಸಾವಿರಾರು ಜನರು ಏಕಕಾಲಕ್ಕೆ ಪ್ರಾರ್ಥನೆ ಸಲ್ಲಿಸುವುದು ಹಬ್ಬದ ವಾಡಿಕೆ. ಧರ್ಮ ಗುರುಗಳ ಉಪದೇಶ ಆಲಿಸಿ ಹಬ್ಬ ಆಚರಿಸಿದರು.ಪ್ರಾರ್ಥನೆ ಬಳಿಕ ಒಬ್ಬರನೊಬ್ಬರು ಆಲಂಗಿಸಿ ಶುಭಾಶಯಗಳನ್ನು ವಿನಿಮಯ ಮಾಡಿಕೊಂಡರು.

ಈ ಸಂದರ್ಭದಲ್ಲಿ ತಾಲೂಕಿನ ಅಮಿರಸಾಬ ಹಾಜಿ ಕುತಬುದ್ದೀನ ಬಸ್ಸಾಪೂರಿ, ಹಾಫೀಜ್ ಜಮಶೆದ್ ಶೇಖ ಸೇರಿದಂತೆ ಸಾವಿರಾರು ಮುಸ್ಲಿಂ ಭಾಂಧವರು ಉಪಸ್ಥಿತರಿದ್ದರು.



ಗೋಕಾಕ : ಬಕ್ರೀದ್ ಹಬ್ಬದ ಪ್ರಯುಕ್ತ ಸಾಮೂಹಿಕ ಪ್ರಾರ್ಥನೆ ಸಲ್ಲಿಸುತ್ತಿರುವ ಮುಸ್ಲಿಂ ಭಾಂಧವರು.

# ದಲಿತ ಯುವಕ ರವಿಚಂದ್ರ ಸಾವು ಪೂರ್ವಯೋಜಿತ ಕೊಲೆ: ಮುದ್ದೇಬಿಹಾಳದ ಅಂಬೇಡ್ಕರ್ ವೃತ್ತದಲ್ಲಿ ಶವದ ಅಂಬ್ಯುಲೆನ್ಸ್ ತಡೆದು ದಲಿತ ಸಂಘಟನೆಗಳಿಂದ ಉಗ್ರ ಪ್ರತಿಭಟನೆ

**ಬೆಳಗಾವಿ ವಾರ್ತೆ ಮುದ್ದೇಬಿಹಾಳ:** ಬಸವನ ಬಾಗೇವಾಡಿ ಪೊಲೀಸ್ ಠಾಣೆ ವ್ಯಾಪ್ತಿಯ ಹಂಗರಗಿ ಕ್ರಾಸ್ ಹತ್ತಿರವಿರುವ ಎನ್. ಎಸ್. ಪೂಜಾರಿ ಪ್ಲಾಂಟ್ ಎದುರು ನಾಗರಬೆಟ್ಟ ಗ್ರಾಮದ ದಲಿತ ಯುವಕ ರವಿಚಂದ್ರ ದೇವಪ್ಪ ಮಾದರ (26) ಎಂಬಾತನ ಸಾವು ಆತ್ಮಹತ್ಯೆಯಲ್ಲ, ಅದೊಂದು ಪೂರ್ವಯೋಜಿತ ಕೊಲೆಯಾಗಿದೆ ಎಂದು ಆರೋಪಿಸಿ ವಿವಿಧ ದಲಿತಪರ ಮರಣೋತ್ತರ ಪರೀಕ್ಷೆ ಮುಗಿಸಿ ವಿಜಯಪುರ ರಸ್ತೆ ಮಾರ್ಗವಾಗಿ ಮೃತನ ಸ್ವಗ್ರಾಮ ನಾಗರಬೆಟ್ಟಕ್ಕೆ ಶವವನ್ನು ಸಾಗಿಸುತ್ತಿದ್ದ ಅಂಬ್ಯುಲೆನ್ಸ್ ವಾಹನವನ್ನು ಪ್ರತಿಭಟನಾ ಕಾರರು ವೃತ್ತದಲ್ಲಿ ಅಡ್ಡಗಟ್ಟಿದರು. ವಾಹನದ ಎದುರು ರಸ್ತೆಯಲ್ಲೇ ಕುಳಿತುಕೊಂಡು ತೀವ್ರ ಆಕ್ರೋಶ ವ್ಯಕ್ತಪಡಿಸಿದ ಮುಖಂಡರು, ಒಂದು ಹಂತದಲ್ಲಿ ಶವವನ್ನು ರಸ್ತೆಯ ಮೇಲಿಟ್ಟು ಧರಣಿ ಕೂರಲು ಯತ್ನಿಸಿದರು. ಆದರೆ, ಹಿರಿಯರ ಹಿತನುಡಿಯ ಮೇರೆಗೆ ಆ ಪ್ರಯತ್ನವನ್ನು ಕೈಬಿಟ್ಟು ರಸ್ತೆ ತಡೆ ಮುಂದುವರಿಸಿದರು.



**ಮೇಲ್ನೋಟಕ್ಕೇ ಕೊಲೆ ಎಂಬುದು ಸ್ಪಷ್ಟ:** ಪ್ರತಿಭಟನೆಯನ್ನುದ್ದೇಶಿಸಿ ದಲಿತ ಸಂಘ ಟನೆಗಳ ಪ್ರಮುಖ ಮುಖಂಡರಾದ ಹರೀಶ ನಾಟೀಕಾರ, ಕೆ.ಬಿ. ದೊಡಮನಿ ವಕೀಲರು, ಬಸವರಾಜ ಪೂಜಾರಿ ಸಿದ್ದಾಪುರ, ತಿಪ್ಪಣ್ಣ ದೊಡಮನಿ ಗೋನಾಳ, ಚನ್ನಪ್ಪ ವಿಜಯಕರ್, ಬಾಲಚಂದ್ರ ಹುಲ್ಲೂರ ಹಾಗೂ ಹುಲಗಪ್ಪ ಮಾದರ ಮಾತನಾಡಿ, "ರವಿಚಂದ್ರನನ್ನು ಕ್ರೂರವಾಗಿ ಕೊಲೆ ಮಾಡಿ, ನಂತರ ಮೃತದೇಹವನ್ನು ನೇಣು ಹಾಕಿ ಆತ್ಮಹತ್ಯೆಯಂತೆ ಬಿಂಬಿಸುವ ವ್ಯವಸ್ಥಿತ ಸಂಚು ನಡೆದಿದೆ. ಮೃತನ ತೊಡೆಗಳ ಮೇಲೆ ಹಾಗೂ ಮರ್ಮಾಂಗದಿಂದ ರಕ್ತ ಸೋರಿರುವ ಗುರುತುಗಳಿದ್ದು, ಮರ್ಮಾಂಗಕ್ಕೆ ಮಾರಣಾಂತಿಕವಾಗಿ ಹೊಡೆದು ಕೊಲೆ ಮಾಡಿರುವುದು ಮೇಲ್ನೋಟಕ್ಕೇ ಸಾಬೀತಾಗುತ್ತದೆ. 4-5 ವರ್ಷಗಳಿಂದ ನಿಷ್ಠೆಯಿಂದ ದುಡಿದ ಬಡ ಯುವಕನಿಗೆ ಇಂತಹ ಸ್ಥಿತಿ ತಂದಿಟ್ಟಿರುವುದು ಖಂಡನೀಯ. ಈ ಪ್ರಕರಣದಲ್ಲಿ ಪೊಲೀಸ್ ಇಲಾಖೆಯ ವೈಫಲ್ಯ ಎದ್ದು ಕಾಣುತ್ತಿದ್ದು, ಬಡವರ ಮಕ್ಕಳ ಸಾವಿಗೆ ಇಲ್ಲಿ ಬೆಲೆಯೇ ಇಲ್ಲದಂತಾಗಿದೆ" ಎಂದು ತೀವ್ರವಾಗಿ ತರಾಟೆಗೆ ತೆಗೆದುಕೊಂಡರು.

**ಜಾತಿ ನಿಂದನೆ ಮಾಡಿ ಕೊಲೆಗೈದ ಆರೋಪ:** ಮಂಗಳವಾರ ಬೆಳಿಗ್ಗೆ ರವಿಚಂದ್ರನ ಶವ ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾದಾಗ ಬಸವನ ಬಾಗೇವಾಡಿ ಇನ್ಸ್‌ಪೆಕ್ಟರ್ ಗುರುಶಾಂತ ದಾಸ್ಯಾಳ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದರು. ಈ ಸಂಬಂಧ ಮೃತನ ತಂದೆ ದೇವಪ್ಪ ಗಂಗಪ್ಪ ಮಾದರ ದೂರು ದಾಖಲಿಸಿದ್ದು,ಕೃತ್ಯ ಎಸಗಿದ ಪ್ರಕರಣದ ಎಲ್ಲಾ ಆರೋಪಿಗಳನ್ನು ವಿಳಂಬ ಮಾಡದೇ ತಕ್ಷಣವೇ ಬಂಧಿಸಬೇಕು ಎಂದು ಪ್ರತಿಭಟನಾಕಾರರು ಗಡುವು ನೀಡಿದರು.

ಪ್ರತಿಭಟನೆಯಲ್ಲಿ ಮುಖಂಡರಾದ ಶಿವು ಶಿವಪೂರ, ಆನಂದ ಮುದೂರ, ಹುಲಗಪ್ಪ ಮಾದರ,ಶೇಖರ ಮಾದರ ಆಲೂರ, ಮಲ್ಲು ತಳವಾರ ಬಿಜ್ಜೂರ, ಬಲಭೀಮ ನಾಯಕಮಕ್ಕಳ, ದೇವಪ್ಪ ಮಾದರ, ಮಾರುತಿ ಸಿದ್ದಾಪೂರ,ವಿವಿಧ ದಲಿತಪರ ಸಂಘಟನೆಗಳ ಪದಾಧಿಕಾರಿಗಳು, ಮೃತನ ಆಕ್ರಂದನ ಮುಗಿಲು ಮುಟ್ಟಿದ್ದ ಪಾಲಕರು ಹಾಗೂ ನಾಗರಬೆಟ್ಟ ಗ್ರಾಮದ ನೂರಾರು ಸಾರ್ವಜನಿಕರು ಭಾಗವಹಿಸಿದ್ದರು.

# ಅಂದೇ ಸಿದ್ದರಾಮಯ್ಯ ಭವಿಷ್ಯ ನುಡಿದಿತ್ತು ಮಣ್ಣಿನ ಬೊಂಬೆ

**ಬೆಳಗಾವಿ ವಾರ್ತೆ ಧಾರವಾಡ:** "ನಿಜವಾಯ್ತು ಮಣ್ಣಿನ ಬೊಂಬೆ ಭವಿಷ್ಯ" 'ರಾಜ್ಯ ರಾಜಕೀಯದಲ್ಲಿ ಬದಲಾವಣೆ ಶತಸಿದ್ಧ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಸ್ಥಾನ ಅಭದ್ರ' ಎಂಬ ಧಾರವಾಡ ತಾಲೂಕು ಉಪ್ಪಿನಬೆಟಗೇರಿಯ ಹನುಮನಕೊಪ್ಪ ಗ್ರಾಮದ ಈ ವರ್ಷದ ಯುಗಾದಿ ಫಲಾಫಲದ ಮಣ್ಣಿನ ಬೊಂಬೆ ಭವಿಷ್ಯ ಈಗ ನಿಜವಾದಂತಾಗಿದೆ.

ಮುಖ್ಯಮಂತ್ರಿ ಸಿದ್ದರಾಮಯ್ಯನವರು ಗುರುವಾರದಂದು ತಮ್ಮ ಸ್ಥಾನಕ್ಕೆ ರಾಜೀನಾಮೆ ಸಲ್ಲಿಸುವ ಮೂಲಕ ಹನುಮನಕೊಪ್ಪ ಗ್ರಾಮದಲ್ಲಿ ಈ ವರ್ಷ ಯುಗಾದಿ ಪಾಡ್ಯದಂದು ಮಣ್ಣಿನ ಗೊಂಬೆಯು ತಿಳಿಸಿದ ಮುನ್ಸೂಚನೆಯ ಭವಿಷ್ಯವು ನಿಜ ಆಗಿದೆ. ಪ್ರಸಕ್ತ ವರ್ಷದ ಯುಗಾದಿ ಫಲಾಫಲ ಕಟ್ಟಿದ ಮಣ್ಣಿನ ಗದ್ದುಗೆಯ ನಾಲ್ಕು ದಿಕ್ಕಿಗೆ ಇರುವ ರಾಜಕಾರಣದ ದಿಕ್ಸೂಚಿಯ ಬೊಂಬೆಯಲ್ಲಿ ರಾಜ್ಯ ರಾಜಕೀಯ ಸೂಚಿಸುವ ದಿಕ್ಕಿನ ಬೊಂಬೆಗೆ ಧಕ್ಕೆಯಾಗಿತ್ತು, ಹೀಗಾಗಿ ರಾಜ್ಯ ರಾಜಕೀಯದಲ್ಲಿ ಬದಲಾವಣೆ ಶತಸಿದ್ಧ ಎಂದು ಹೇಳಲಾಗಿತ್ತು. ಅದರಂತೆ ಈಗ ಘಟಿಸಿದೆ.

ನೂರಾರು ವರ್ಷಗಳಿಂದ ಇಲ್ಲಿನ ತುಪ್ಪರಿ ಹಳ್ಳದ ತಟದಲ್ಲಿ ಸಂಪ್ರದಾಯಬದ್ಧವಾಗಿ ಮಣ್ಣಿನಿಂದ ನಿರ್ಮಿಸಿರುವ ಗದ್ದುಗೆಯ ಮೂಲಕ ಮಣ್ಣಿನ ಬೊಂಬೆಗಳ ಯುಗಾದಿ ಫಲಾಫಲದ ವರ್ಷದ ಭವಿಷ್ಯದ ಮುನ್ಸೂಚನೆಯನ್ನು ಯುಗಾದಿ ಪಾಡ್ಯೆಯ ದಿನದಂದು ತಿಳಿಸುತ್ತಾ ಬರಲಾಗುತ್ತಿದೆ.

ನಿಜವಾದ ಭವಿಷ್ಯ ಈ ಹಿಂದೆ ಇಲ್ಲಿನ ಬೊಂಬೆಗಳ ಭವಿಷ್ಯ ಸಾಕಷ್ಟು ಸಲ ನಿಜವಾಗಿದ್ದು, ಮಾಜಿ ಪ್ರಧಾನಿ ಇಂದಿರಾ ಗಾಂಧಿ ಹಾಗೂ ರಾಜೀವ ಗಾಂಧಿ ಅವರ ಹತ್ಯೆ, ಆಂಧ್ರಪ್ರದೇಶದ ಮಾಜಿ ಮುಖ್ಯಮಂತ್ರಿ ರಾಜಶೇಖರ ರೆಡ್ಡಿ ಅವರ ದುರಂತ ಸಾವು, ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಬದಲಾವಣೆ ಹಾಗೂ ಚಿತ್ರನಟ ಪುನೀತ ರಾಜಕುಮಾರ ಅವರ ಅಕಾಲಿಕ ಸಾವು ಹಾಗೂ ರಾಜ್ಯ ರಾಜಕಾರಣದಲ್ಲಿ ಅನೇಕ ಬದಲಾವಣೆ ಮತ್ತು ಈಗ ಮುಖ್ಯಮಂತ್ರಿ ಸಿದ್ದರಾಮಯ್ಯನವರ ರಾಜೀನಾಮೆ ಹೀಗೆ ಇನ್ನೂ ಅನೇಕ ಸಂಗತಿಗಳು ಈ ಮಣ್ಣಿನ ಬೊಂಬೆಗಳ ಮುನ್ಸೂಚನೆಯ ಭವಿಷ್ಯ ನಿಜವಾಗಿವೆ.



# ಶಿಸ್ತು, ಸಮಯಪಾಲನೆ ಹಾಗೂ ದೃಢ ಮನೋಬಲ ಹೊಂದಿದವರಿಗೆ ಯಶಸ್ಸು ಖಚಿತ




**ಬೆಳಗಾವಿ ವಾರ್ತೆ ಮೂಡಲಗಿ:** ಶಿಸ್ತು, ಸಮಯಪಾಲನೆ ಹಾಗೂ ದೃಢ ಮನೋಬಲ ಹೊಂದಿದವರಿಗೆ ಯಶಸ್ಸು ಖಚಿತ. ಇಂದಿನ ವಿದ್ಯಾರ್ಥಿಗಳೇ ನಾಳಿನ ಸಮಾಜದ ದಿಕ್ಕು ತೋರಿಸುವ ಶಕ್ತಿಯಾಗಿದ್ದು, ಆತ್ಮವಿಶ್ವಾಸದಿಂದ ತಮ್ಮ ಗುರಿಯತ್ತ ಮುನ್ನಡೆಯಬೇಕು" ಎಂದು ಗೋಕಾಕದ ಶಿಕ್ಷಕ ರಾಮಚಂದ್ರ ಕಾಕಡೆ ಹೇಳಿದರು.

ಅವರು ಪಟ್ಟಣದ ಮೂಡಲಗಿ ಶಿಕ್ಷಣ ಸಂಸ್ಥೆಯ ಬಿಪಿಎಡ್ ಹಾಗೂ ಎಂಪಿಎಡ್ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭವು ಮುಖ್ಯ ಅತಿಥಿ ಸ್ಥಾನದಿಂದ ಮಾತನಾಡಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ ವೆಂಕಟೇಶ ಸೋನಾಲಕರ ಮಾತನಾಡಿ, ಶಿಸ್ತು, ಪರಿಶ್ರಮ ಮತ್ತು ಅಚಲ ಸಂಕಲ್ಪವೇ ಯಶಸ್ಸಿನ ನಿಜವಾದ ಮೂಲಮಂತ್ರವಾಗಿದು, "ವಿದ್ಯಾರ್ಥಿ ಜೀವನವು ಕೇವಲ ಪದವಿ ಪಡೆಯುವ ಹಂತವಲ್ಲ; ಅದು ವ್ಯಕ್ತಿತ್ವ ವಿಕಸನದ ಜೊತೆಗೆ ಕನಸುಗಳಿಗೆ ದಿಕ್ಕು ನೀಡುವ ಸುವರ್ಣ ಘಟ್ಟ. ಪ್ರತಿಯೊಬ್ಬ ವಿದ್ಯಾರ್ಥಿಯೂ ತಮ್ಮೊಳಗಿನ ಸಾಮರ್ಥ್ಯವನ್ನು ಗುರುತಿಸಿ, ಅದನ್ನು ಸಾಧನೆಯ ರೂಪಕ್ಕೆ ತಂದುಕೊಳ್ಳಬೇಕು" ಎಂದರು

ಪ್ರತಿಯೊಬ್ಬರು ಆರೋಗ್ಯದ ಬಗ್ಗೆ ಕಾಳಜಿ, ನಿರಂತರ ಅಧ್ಯಯನ, ಆತ್ಮವಿಶ್ವಾಸ ಹಾಗೂ ಗುರಿ ಸಾಧಿಸುವ ಛಲ ಬೆಳೆಸಿಕೊಂಡರೆ ಜೀವನದಲ್ಲಿ ಯಾವುದೇ ಶಿಖರವೂ ದೂರವಿರುವುದಿಲ್ಲ ಎಂದು ವಿದ್ಯಾರ್ಥಿಗಳಿಗೆ ಪ್ರೇರಣಾದಾಯಕ ಸಂದೇಶ ನೀಡಿದರು.

ಕಾಲೇಜಿನ ಪ್ರಾಚಾರ್ಯ ಡಾ. ಎಂ.ಕೆ. ಕಂಕಣವಾಡಿ ಮಾತನಾಡಿ, "ಶಿಕ್ಷಣವು ಕೇವಲ ಪದವಿ ಪಡೆಯುವ ಸಾಧನವಾಗಿರದೆ, ವ್ಯಕ್ತಿತ್ವವನ್ನು ರೂಪಿಸುವ ಶಕ್ತಿ. ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಶಿಸ್ತು, ಮೌಲ್ಯಗಳು ಹಾಗೂ ಸೇವಾಭಾವವನ್ನು ಅಳವಡಿಸಿಕೊಂಡು ಸಮಾಜಕ್ಕೆ ಆದರ್ಶ ಶಿಕ್ಷಕರಾಗಿ ಹೊರಹೊಮ್ಮಬೇಕು. ಪರಿಶ್ರಮ ಮತ್ತು ಆತ್ಮವಿಶ್ವಾಸದಿಂದ ಸಾಗಿದರೆ ಯಶಸ್ಸು ನಿಮ್ಮನ್ನು ಹುಡುಕಿಕೊಂಡೇ ಬರುತ್ತದೆ" ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ವಿದ್ಯಾರ್ಥಿಗಳು ತಮ್ಮ ಕಾಲೇಜು ಜೀವನದ ಸಿಹಿ ನೆನಪುಗಳನ್ನು ಹಂಚಿಕೊಂಡು ಭಾವುಕರಾದರು. ಗುರುಗಳ ಮಾರ್ಗದರ್ಶನ, ಸ್ನೇಹಿತರೊಂದಿಗೆ ಕಳೆದ ಅಮೂಲ್ಯ ಕ್ಷಣಗಳ ನೆನಪುಗಳು ಸಭಾಂಗಣದಲ್ಲಿ ಭಾವನಾತ್ಮಕ ವಾತಾವರಣ ನಿರ್ಮಿಸಿತು ಹಾಗೂ

ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು ಕಾರ್ಯಕ್ರಮದಲ್ಲಿ ಶಿಕ್ಷಣ ಸಂಸ್ಥೆಯ ನಿರ್ದೇಶಕ ಅಪ್ಪಾಸಾಹೇಬ ಹೊಸಕೋಟೆ, ಮಹಾವಿದ್ಯಾಲಯದ ಆಡಳಿತಾಧಿಕಾರಿ ಡಾ.ಎಸ್.ಎಲ್. ಚಿತ್ರಗಾರ, ಡಾ. ಎಲ್.ಬಿ. ಮನ್ನಾಪುರ, ಬಿ.ಕೆ. ಬಡಗಣ್ಣವರ, ಬಿ.ಎಸ್. ಕಂಬಾರ, ಎಸ್.ಎಂ. ಹಳ್ಳೂರ ಮತ್ತಿತರು ಉಪಸ್ಥಿತರಿದ್ದು

# ಉಚಿತ ಯೋಗ ತರಬೇತಿಗೆ ನೋಂದಣಿ

**ಬೆಳಗಾವಿ ವಾರ್ತೆ ಬಾಗಲಕೋಟೆ:** ಭಾರತ ಸರಕಾರದ ಆಯುಷ ಮಂತ್ರಾಲಯವು 12ನೇ ಅಂತರರಾಷ್ಟ್ರೀಯ ಯೋಗ ದಿನಾಚರಣೆ ಇದೇ ಜೂನ್ 21 ರಂದು ರಾಷ್ಟ್ರಾದಾದ್ಯಂತ ಆಚರಿಸಲು ನಿರ್ಧರಿಸಲಾಗಿದ್ದು,

ಈ ಹಿನ್ನಲೆಯಲ್ಲಿ ಉಚಿತವಾಗಿ 14 ದಿನಗಳ ಯೋಗ ತರಬೇತಿಯನ್ನು ಆನ್‌ಲೈನ್ ಮೂಲಕ ಮೊರಾರ್ಜಿ ದೇಸಾಯಿ ಯೋಗ ಸಂಸ್ಥೆ ನವ ದೆಹಲಿಯಿಂದ ಕಾರ್ಯಕ್ರಮ ಆಯೋಜಿಸಲಾಗಿದೆ.

ತರಬೇತಿಯಲ್ಲಿ ಪಾಲ್ಗೊಳ್ಳಲು ಆ ಯುಷ ಮಂತ್ರಾಲಯದ ವೆಬ್‌ಸೈಟ್ http://moahabityoga?ref=karnataka ನಲ್ಲಿ ಜಿಲ್ಲೆಯ ಎಲ್ಲ ಸರಕಾರಿ ನೌಕರರು ಹಾಗೂ ಅವರ ಕುಟುಂಬದ ಸದಸ್ಯರು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ನೋಂದಾಯಿಸಿಕೊಂಡು ತರಬೇತಿ ಪಡೆದುಕೊಂಡು ಅಂತರರಾಷ್ಟ್ರೀಯ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಜಿಲ್ಲಾ ಆಯುಷ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಾಣಿಜ್ಯನಗರಿಯಲ್ಲಿ ಬಕ್ರೀದ್ ಹಿನ್ನೆಲೆ ಈದ್ಗಾ ಮೈದಾನದಲ್ಲಿ ಪ್ರಾರ್ಥನೆ



**ಬೆಳಗಾವಿ ವಾರ್ತೆ ಹುಬ್ಬಳ್ಳಿ:** ತ್ಯಾಗ ಬಲಿದಾನಗಳ ಪ್ರತೀಕವಾದ ಬಕ್ರೀದ್ ಹಬ್ಬವನ್ನು ಗುರುವಾರ ಸಂಭ್ರಮದಿಂದ ಆಚರಿಸಿದರು. ಅಲ್ಲಾಹು ನಾಮ ಪಠಣದೊಂದಿಗೆ ನಗರದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸುತ್ತ, ಕಿತ್ತೂರು ರಾಣಿ ಚನ್ನಮ್ಮ ವೃತ್ತದ ಬಳಿಯ ಈದ್ಗಾ ಮೈದಾನ ಹಾಗೂ ಹಳೇ ಹುಬ್ಬಳ್ಳಿ ಈದ್ಗಾ ಮೈದಾನಕ್ಕೆ ತೆರಳಿ, ಧಾರ್ಮಿಕ ವಿಧಿ ವಿಧಾನಗಳ ಮೂಲಕ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಸಾವಿರಾರು ಮಂದಿ ಪಾಲ್ಗೊಂಡಿದ್ದರು.

ಪ್ರಾರ್ಥನೆಯಲ್ಲಿ ಭಾಗವಹಿಸಿದ್ದ ಮುಸ್ಲಿಮ್ ಧರ್ಮಗುರು ಮೌಲಾನ್ ಜಹೀರುದ್ದೀನ್ ಖಾಜಿ, 'ಇಸ್ಲಾಂ ಧರ್ಮದ ಸಿದ್ಧಾಂತಗಳನ್ನು ಪಾಲಿಸುತ್ತ, ಪ್ರತಿಯೊಬ್ಬರಿಗೂ ಒಳಿತನ್ನು ಬಯಸಬೇಕು. ಅಲ್ಲಾಹುವಿನ ಕೃಪೆಗೆ ಪಾತ್ರರಾದಾಗ ಮೋಕ್ಷ ಪಡೆಯಲು ಸಾಧ್ಯ. ಉತ್ತಮ ಮಳೆಯಾಗಿ, ದೇಶ ಸುಭೀಕ್ಷವಾಗಲಿ. ದೇಶದ ಸಮಸ್ತ ಜನರಿಗೆ ಆರೋಗ್ಯ, ಶಾಂತಿ, ಸಹನೆ, ದಾನ ಧರ್ಮದ ಗುಣಗಳನ್ನು ನೀಡಲಿ' ಎಂದರು.

ಅದೇ ರೀತಿ ಹಳೇಹುಬ್ಬಳ್ಳಿ ಈದ್ಗಾ ಮೈದಾನದಲ್ಲಿ ಸಾವಿರಾರು ಜನಸೇರಿ ಈದ್ ಉಲ್ ಅದಹಾ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು. ಪ್ರಾರ್ಥನೆಯ ನಂತರ ಹಿರಿಯರು, ಕಿರಿಯರೆನ್ನದೆ ಪರಸ್ಪರ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು. ನಂತರ ಓಣಿ ಓಣಿಯಲ್ಲಿ ಕುರುಬಾನಿ ವಿತರಿಸಿ ಪರಸ್ಪರ ಶುಭಾಷಯ ಕೋರಿಕೊಂಡರು.

ಅಂಜುಮನ್ ಸಂಸ್ಥೆ ಅಧ್ಯಕ್ಷ ಎ.ಎಂ. ಹಿಂಡಸಗೇರಿ, ಅಲ್ತಾಫ್ ಕಿತ್ತೂರ, ಅಲ್ತಾಫ್ ಹಳ್ಳೂರು, ಶಿರಾಜ್‌ಅಹ್ಮದ್ ಕುಡಚಿವಾಲೆ, ಮೌಲಾನಾ ನಯೀಮೋದ್ದೀನ ಶೇಖ, ಬಶೀರ ಹಳ್ಳೂರ ಸೇರಿದಂತೆ ಇತರರು ಇದ್ದರು.

# ಮೆಟ್ರಿಕ್ ನಂತರದ ಬಾಲಕರ ಹಾಗೂ ಬಾಲಕಿಯರ ವಸತಿ ನಿಲಯ ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಧಾರವಾಡ: 2026-27ನೇ ಸಾಲಿನ ಪಿ.ಯು.ಸಿ ಕೋರ್ಸುಗಳಿಗೆ ಧಾರವಾಡ ತಾಲ್ಲೂಕಿನಲ್ಲಿರುವ ಸಮಾಜ ಕಲ್ಯಾಣ ಇಲಾಖೆಯಿಂದ ನಡೆಯುತ್ತಿರುವ ಮೆಟ್ರಿಕ್ ನಂತರದ ಬಾಲಕರ ಹಾಗೂ ಬಾಲಕಿಯರ ವಸತಿ ನಿಲಯಗಳಲ್ಲಿನ ಖಾಲಿ ಸ್ಥಳಗಳಿಗೆ ಅರ್ಹ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ವಸತಿ ನಿಲಯಗಳಲ್ಲಿ ಶೇ.50 ರಷ್ಟು ಪರಿಶಿಷ್ಟ ಜಾತಿ ಹಾಗೂ ಶೇ.25 ರಷ್ಟು ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಗೆ ಖಾಲಿ ಸ್ಥಾನಗಳ ಲಭ್ಯತೆ ಅನುಗುಣವಾಗಿ ಪ್ರವೇಶ ನೀಡಲಾಗುವುದು. ಅರ್ಜಿ ಸಲ್ಲಿಸುವ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷ ಮೀರಿರಬಾರದು. ಮತ್ತು ಉಚಿತ ಊಟ ಹಾಗೂ ವಸತಿ ಸೌಲಭ್ಯ ಕಲ್ಪಿಸಲಾಗುವುದು. ಆಸಕ್ತ ವಿದ್ಯಾರ್ಥಿಗಳು ವೆಬ್‌ಸೈಟ್ https://swd.kar.nic.in ಮೂಲಕ ಅರ್ಜಿ ಸಲ್ಲಿಸಬಹುದು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 0836-2440194 ಗೆ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಫ್ಲೆಕ್ಸ್, ಬ್ಯಾನರ್ ತೆರವುಗೊಳಿಸಿ



**ಬೆಳಗಾವಿ ವಾರ್ತೆ ಲಕ್ಷೇಶ್ವರ:** ಪಟ್ಟಣ ಹೊಸ ಬಸ್ ನಿಲ್ದಾಣದ ಎದುರಿಗಿರುವ ಪುರಸಭೆಯ ಸಣ್ಣ ಮತ್ತು ಮಧ್ಯಮ ಪಟ್ಟಣ ಅಭಿವೃದ್ಧಿ ಯೋಜನೆಯ ವಾಣಿಜ್ಯ ಸಂಕಿರಣ ಸೇರಿದಂತೆ ಖಾಸಗಿ ಕಟ್ಟಡಗಳ ಮೇಲೆ ಫ್ಲೆಕ್ಸ್ ಮತ್ತು ಬ್ಯಾನರ್ ಗಳನ್ನು ಕಟ್ಟಲಾಗುತ್ತಿದೆ. ಆದರೆ ರಾಜ್ಯ ಸರ್ಕಾರದ ನಗರಾಭಿವೃದ್ಧಿ ಇಲಾಖೆಯ ನಿರ್ದೇಶನಾದಂತೆ ಯಾವುದೇ ಫ್ಲೆಕ್ಸ್ ಮತ್ತು ಬ್ಯಾನರ್ ಕಟ್ಟಲು ಪುರಸಭೆಯ ಅನುಮತಿಯೊಂದಿಗೆ ನಿರ್ದಿಷ್ಟ ಶುಲ್ಕ ಪಾವತಿಸಿ ನಂತರ ಅದನ್ನು ತೆಗೆದು ಹಾಕಬೇಕಾಗುತ್ತದೆ.

ಆದರೆ ಹಾಕಿರುವ ಫ್ಲೆಕ್ಸ್ ಮತ್ತು ಬ್ಯಾನರ್‌ಗಳು ಛಿದ್ರವಾದರೂ ಅವುಗಳನ್ನು ಪುರಸಭೆಯವರಾಗಲಿ ಅಥವಾ ಜಾಹಿರಾತುದಾರರಾಗಲಿ ತೆಗೆದು ಹಾಕುವುದಿಲ್ಲ.

ನಿನ್ನೆ ಸಂಜೆ ಏಕಾಏಕಿ ಬೃಹತ್ ಬ್ಯಾನರ್ ಒಂದು ಬೀಸಿದ ಗಾಳಿಗೆ ಹಾರಿ ವಿದ್ಯುತ್ ತಂತಿಗಳ ಮೇಲೆ ಬೀಳುತ್ತಿದ್ದಂತೆ ಭಾರಿ ಶಬ್ದದೊಂದಿಗೆ ವಿದ್ಯುತ್ ಕೈಕೊಟ್ಟಿದ್ದು, ಇನ್ನಾದರೂ ಪುರಸಭೆಯವರು ಭಾರಿ ಗಾಳಿ ಮಳೆಗೆ ಅವಘಡಗಳು ಸಂಭವಿಸಿ ಸಾವು ನೋವು ಸಂಭವಿಸುವ ಮೊದಲೇ ಇಂಥವುಗಳನ್ನು ತೆರವು ಗೊಳಿಸಬೇಕು ಯುವ ಮುಖಂಡ ಯಲ್ಲಪ್ಪ ಹಂಜಗಿ ಪುರಸಭೆಗೆ ಒತ್ತಾಯಿಸಿದ್ದಾರೆ.

# ಸಿದ್ದರಾಮಯ್ಯ ಕೆಳಗಿಳಿಸಿದ್ದು ಕಾಂಗ್ರೆಸ್ ಪತನಕ್ಕೆ ನಾಂದಿ

**ಬೆಳಗಾವಿ ವಾರ್ತೆ ಬೆಳಗಾವಿ:** 'ಕಾಂಗ್ರೆಸ್ ಹೈಕಮಾಂಡ್ ನೇರವಾಗಿ ಜೇನುಗೂಡಿಗೆ ಕೈ ಹಾಕಿದೆ. ಸಿದ್ದರಾಮಯ್ಯ ಅವರನ್ನು ಮುಖ್ಯಮಂತ್ರಿ ಸ್ಥಾನದಿಂದ ಕೆಳಗಿಳಿಸುವ ಮೂಲಕ ರಾಜ್ಯದ ರಾಜಕೀಯ ಪರಿಸ್ಥಿತಿ ಹದಗೆಡಿಸಿದೆ. ಸಿದ್ದರಾಮಯ್ಯ ಅವರ ಕಣ್ಣೀರು 2028ರ ಚುನಾವಣೆಯಲ್ಲಿ ಜ್ವಾಲಾಮುಖಿಯಾಗಿ ಸ್ಫೋಟಿಸಲಿದೆ' ಎಂದು ವಿಧಾನ ಪರಿಷತ್ ಸದಸ್ಯ ಲಖನ್ ಜಾರಕಿಹೊಳಿ ಭವಿಷ್ಯ ನುಡಿದಿದ್ದಾರೆ.

ಮಾಧ್ಯಮಗಳಿಗೆ ವಿಡಿಯೋ ಹೇಳಿಕೆ ಬಿಡುಗಡೆ ಮಾಡಿದ ಅವರು, 'ಸಿದ್ದರಾಮಯ್ಯ ಅವರ ರಾಜೀನಾಮೆ ಕಾಂಗ್ರೆಸ್ ಪತನಕ್ಕೆ ಕಾರಣವಾಗಲಿದೆ. ರಾಜ್ಯವೂ ಅಧಃಪತನದತ್ತ ಸಾಗಲಿದೆ. ಅಹಿಂದ ಚಳವಳಿಯನ್ನೇ ಕಾಂಗ್ರೆಸ್ ಹೈಕಮಾಂಡ್ ತುಳಿದು ಹಾಕಿದೆ' ಎಂದು ಆಕ್ರೋಶ ವ್ಯಕ್ತಪಡಿಸಿದರು.

'ಸಿದ್ದರಾಮಯ್ಯ ಅವರು ಗ್ಯಾರಂಟಿ ಯೋಜನೆಗಳನ್ನು ಶಿಸ್ತಿನಿಂದ ಜಾರಿಗೊಳಿಸಿದ್ದರು. ರಾಜ್ಯದ ಆರ್ಥಿಕತೆಗೆ ತೊಂದರೆಯಾಗದಂತೆ ಅವುಗಳನ್ನು ನಿಭಾಯಿಸಿದ್ದರು. ಆದರೆ, ಇನ್ನು ಮುಂದೆ ಗ್ಯಾರಂಟಿ ಯೋಜನೆಗಳು ಮುಂದುವರಿಯುವ ಬಗ್ಗೆ ಅನುಮಾನವಿದೆ. ಕಾಂಗ್ರೆಸ್ ನಾಯಕರಾದ ವೇಣುಗೋಪಾಲ ಹಾಗೂ ಸುರ್ಜೇವಾಲಾ ಅವರಿಗೆ ರಾಜ್ಯದ ನಿಜವಾದ ಸಮಸ್ಯೆಗಳ ಅರಿವಿಲ್ಲ. ತಾವೇ ಹೋರಾಟ ಮಾಡಿ ಸರ್ಕಾರ ತಂದಂತೆ ವರ್ತಿಸುತ್ತಿದ್ದಾರೆ' ಎಂದು ಟೀಕಿಸಿದರು.

'2028ರ ಚುನಾವಣೆಯಲ್ಲಿ ಕಾಂಗ್ರೆಸ್ ರಾಜ್ಯದಲ್ಲಿ 40 ಸ್ಥಾನಗಳನ್ನೂ ಗೆಲ್ಲಲು ಸಾಧ್ಯವಾಗುವುದಿಲ್ಲ. ಸಿದ್ದರಾಮಯ್ಯ ಅವರು ಐದು ವರ್ಷ ಪೂರೈಸಿ ಚುನಾವಣೆಗೆ ಹೋಗಬೇಕಾಗಿತ್ತು. ಡಿ.ಕೆ. ಶಿವಕುಮಾರ್ ಉಪಮುಖ್ಯಮಂತ್ರಿಯಾಗಿದ್ದರು. ಹಿರಿಯ ನಾಯಕರಿಗೂ ಸಚಿವ ಸ್ಥಾನಗಳಿದ್ದವು. ಆದರೂ ಇಂತಹ ನಿರ್ಧಾರ ಕೈಗೊಂಡಿರುವುದು ಪಕ್ಷಕ್ಕೆ ಭಾರಿ ಹಾನಿ ತರಲಿದೆ' ಎಂದರು.



ಬಿಜೆಪಿಯ ಉದಾಹರಣೆ ನೀಡಿದ ಅವರು, 'ಯಡಿಯೂರಪ್ಪ ಅವರನ್ನು ಕೆಳಗಿಳಿಸಿ ಬಸವರಾಜ ಬೊಮ್ಮಾಯಿ ಅವರನ್ನು ಮುಖ್ಯಮಂತ್ರಿ ಮಾಡಿದ ಪರಿಣಾಮವನ್ನು ಬಿಜೆಪಿ ಇನ್ನೂ ಎದುರಿಸುತ್ತಿದೆ. ಅದೇ ಪರಿಸ್ಥಿತಿ ಮುಂದೆ ಕಾಂಗ್ರೆಸ್‌ಗೂ ಬರಲಿದೆ. ಜನಮಾನಸದಲ್ಲಿ ನೆಲೆಸಿರುವ 'ಮಾಸ್ ಲೀಡರ್' ಒಬ್ಬರನ್ನು ಅಧಿಕಾರದಿಂದ ಕಿತ್ತೊಗೆಯುವುದನ್ನು ಜನರು ಸಹಿಸುವುದಿಲ್ಲ' ಎಂದು ಹೇಳಿದರು.

'ದಾವಣಗೆರೆ ಮತ್ತು ಬಾಗಲಕೋಟೆ ಉಪಚುನಾವಣೆಗಳಲ್ಲಿ ಕಾಂಗ್ರೆಸ್ ಗೆಲುವಿಗೆ ಅಹಿಂದ ಮತಗಳೇ ಕಾರಣ. ಈಗ ಅಹಿಂದ ನಾಯಕನನ್ನೇ ತುಳಿದಿದ್ದಾರೆ. ಕುರುಬ ಸಮಾಜ ಇದನ್ನು ಎಂದಿಗೂ ಕ್ಷಮಿಸಬಾರದು. ತಕ್ಕ ಪಾಠ ಕಲಿಸಬೇಕು' ಎಂದು ಲಖನ್ ಜಾರಕಿಹೊಳಿ ಕರೆ ನೀಡಿದರು.



**ಬೆಳಗಾವಿ ವಾರ್ತೆ ಗೋಕಾಕ್:** ನಗರದ ಮಹರ್ಷಿ ಶ್ರೀ ವಾಲ್ಮೀಕಿ ಕ್ರೀಡಾಂಗಣದಲ್ಲಿ ದಿ॥ ಶ್ರೀ ಎಸ್ ಎಸ್ ಜಿಡ್ಡಿಮನಿ ಅವರ ಸ್ಮರಣಾರ್ಥವಾಗಿ ಗೋಕಾಕ್ ಅಡ್ವೋಕೇಟ್ ಕ್ರಿಕೆಟ್ ಟೀಮ್ ಫ್ರೆಂಡ್ಸ್ ಅವರು ಹಮ್ಮಿಕೊಂಡ ಗೋಕಾಕ್ ಅಡ್ವೋಕೇಟ್ ಕ್ರಿಕೆಟ್ ಟ್ರೋಫಿ–2026ನ್ನು ಸ್ಥಳೀಯ ಪ್ರತಿಷ್ಠಿತ ಲಕ್ಷ್ಮೀ ಎಜುಕೇಶನ್ ಟ್ರಸ್ಟ್ ನ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಕಾರ್ಯಕಾರಿಣಿ ಸದಸ್ಯರಾದ(ಬೆಳಗಾವಿ ಜಿಲ್ಲಾ) ಸನತ್ ಭೀಮಶಿ ಜಾರಕಿಹೊಳಿ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಪಂದ್ಯಕ್ಕೆ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಪ್ರಧಾನ ಸಿವಿಲ್ ನ್ಯಾಯಾಧೀಶರಾದ ಉಮೇಶ್ ಅತ್ನೂರೆ, ಪ್ರಧಾನ ಸಿವಿಲ್ ದಿವಾಣಿ ನ್ಯಾಯಾಧೀಶರಾದ ಚೈತ್ರಾ ಕುಲಕರ್ಣಿ ಅವರು, ವಕೀಲರ ಸಂಘದ ಅಧ್ಯಕ್ಷರಾದ ಎಸ್ ಜಿ ಬಿ ಪಾಟೀಲ್ ಅವರು ಉಪಸ್ಥಿತರಿದ್ದರು.

# ಬೆಳಗಾವಿಯಲ್ಲಿ ಎಸ್‌ಡಿಆರ್‌ಎಫ್ CPI ಶ್ರೀಶೈಲ ಚೌಗಲೆ ಆತ್ಮಹತ್ಯೆ



**ಬೆಳಗಾವಿ ವಾರ್ತೆ ಬೆಳಗಾವಿ:** ರಾಜ್ಯ ವಿಪತ್ತು ನಿರ್ವಹಣಾ ಪಡೆ (SDRF)ಯ ಸಿಪಿಐ ಶ್ರೀಶೈಲ ಚೌಗಲೆ ಅವರು ಮನೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಗರದ ಚನ್ನಮ್ಮ ನಗರದಲ್ಲಿ ಗುರುವಾರ ಬೆಳಕಿಗೆ ಬಂದಿದೆ. ಈ ಘಟನೆ ಪೊಲೀಸ್ ವಲಯದಲ್ಲಿ ಹಾಗೂ ಕುಟುಂಬಸ್ಥರಲ್ಲಿ ತೀವ್ರ ಆಘಾತ ಮೂಡಿಸಿದೆ.

ಮೃತ ಶ್ರೀಶೈಲ ಚೌಗಲೆ (37) ಅವರು ಕರ್ತವ್ಯನಿಷ್ಠ ಹಾಗೂ ಶಿಸ್ತಿನ ಅಧಿಕಾರಿಯಾಗಿ ಗುರುತಿಸಿಕೊಂಡಿದ್ದರು. ಆದರೆ ಅವರ ಅಕಾಲಿಕ ನಿಧನ ಎಲ್ಲರನ್ನೂ ಬೆಚ್ಚಿಬೀಳಿಸಿದೆ.

**ಬಾಗಿಲು ತೆರೆಯದಿದ್ದರಿಂದ ಅನುಮಾನ :** ಮಾಹಿತಿ ಪ್ರಕಾರ, ಚೌಗಲೆ ಅವರು ಮನೆಯ ಕೊಠಡಿಯಲ್ಲಿ ಒಳಗಿನಿಂದ ಬಾಗಿಲು ಹಾಕಿಕೊಂಡಿದ್ದರು. ಬಹಳ ಸಮಯವಾದರೂ ಬಾಗಿಲು ತೆರೆಯದ ಹಿನ್ನೆಲೆಯಲ್ಲಿ ಅವರ ಪತ್ನಿಗೆ ಅನುಮಾನ ಮೂಡಿದೆ. ತಕ್ಷಣವೇ ಅವರು ಖಆಖಈ ಸಿಬ್ಬಂದಿಗೆ ಮಾಹಿತಿ ನೀಡಿದ್ದಾರೆ. ಬಳಿಕ ಸ್ಥಳಕ್ಕೆ ಧಾವಿಸಿದ ಸಿಬ್ಬಂದಿ ಹಾಗೂ ಇತರರು ಕೊಠಡಿಯ ಬಾಗಿಲು ಮುರಿದು ಒಳಗೆ ಪ್ರವೇಶಿಸಿದ್ದಾರೆ.

**ಆಸ್ಪತ್ರೆಗೆ ಸಾಗಿಸಿದರೂ ಬದುಕಲಿಲ್ಲ :** ಕೊಠಡಿಯೊಳಗೆ ಚೌಗಲೆ ಅವರು ನೇಣು ಬಿಗಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದು, ತಕ್ಷಣ ಅವರನ್ನು ಆಸ್ಪತ್ರೆಗೆ ಸಾಗಿಸಲಾಯಿತು. ಆದರೆ ಅಷ್ಟರಲ್ಲೇ ಅವರು ಮೃತಪಟ್ಟಿರುವುದಾಗಿ ವೈದ್ಯರು ತಿಳಿಸಿದ್ದಾರೆ. ಚೌಗಲೆ ಅವರು ಆತ್ಮಹತ್ಯೆ ಮಾಡಿಕೊಂಡಿರುವುದಕ್ಕೆ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ. ವೈಯಕ್ತಿಕ ಅಥವಾ ವೃತ್ತಿಪರ ಕಾರಣಗಳ ಹಿನ್ನೆಲೆ ಇದೆಯೇ ಎಂಬ ಬಗ್ಗೆ ಪೊಲೀಸರು ತನಿಖೆ ಆರಂಭಿಸಿದ್ದಾರೆ.

ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಬೆಳಗಾವಿಯ ಪರೀಕ್ಷೆಗಾಗಿ ಬಿಮ್ಸ್ ಆಸ್ಪತ್ರೆಯ ಶವಾಗಾರಕ್ಕೆ ರವಾನಿಸಲಾಗಿದೆ.

**ಪೊಲೀಸ್ ತನಿಖೆ ಆರಂಭ :** ಘಟನೆ ಕುರಿತು ಉದ್ಯಮಬಾಗ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆ ಕೈಗೊಂಡಿದ್ದಾರೆ. ಕುಟುಂಬಸ್ಥರು, ಸಹೋದ್ಯೋಗಿಗಳು ಹಾಗೂ ಆಪ್ತರಿಂದ ಮಾಹಿತಿ ಸಂಗ್ರಹಿಸಲಾಗುತ್ತಿದೆ.

ಕರ್ತವ್ಯನಿಷ್ಠ ಹಾಗೂ ಮೃದುಸ್ವಭಾವದ ಅಧಿಕಾರಿಯಾಗಿದ್ದ ಶ್ರೀಶೈಲ ಚೌಗಲೆ ಅವರ ಸಾವಿನಿಂದ ಖಆಖಈ ಸಿಬ್ಬಂದಿ ಮತ್ತು ಪೊಲೀಸ್ ಇಲಾಖೆಯ ಸಹೋದ್ಯೋಗಿಗಳಲ್ಲಿ ದುಃಖದ ವಾತಾವರಣ ನಿರ್ಮಾಣವಾಗಿದೆ. ಆತ್ಮಹತ್ಯೆಗೆ ನಿಜವಾದ ಕಾರಣ ವೇನು ಎಂಬುದು ಮುಂದಿನ ಪೊಲೀಸ್ ತನಿಖೆಯಿಂದಷ್ಟೇ ಸ್ಪಷ್ಟವಾಗಬೇಕಿದೆ.

# ಬೇರೆಯವರು ಯಾರಾದರೂ ಸಿಎಂ ಆದರೆ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಧೂಳೀಪಟವಾಗಲಿದೆ

**ಬೆಳಗಾವಿ ವಾರ್ತೆ ಗೋಕಾಕ:** ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ, ಬೇರೆಯವರು ಯಾರಾದರೂ ಸಿಎಂ ಆದರೆ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷ ಧೂಳೀಪಟವಾಗಲಿದೆ ಎಂದು ವಿಧಾನ ಪರಿಷತ್ ಸದಸ್ಯ ಲಖನ್ ಜಾರಕಿಹೊಳಿ ಹೊಸ ಬಾಂಬ್ ಸಿಡಿಸಿದ್ದಾರೆ.

ಗೋಕಾಕನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಕಾಂಗ್ರೆಸ್ ಪಕ್ಷದ ಅಸ್ತಿತ್ವಕ್ಕೆ ಅಹಿಂದ ಮತಗಳೇ ಜೀವಾಳ. 2023ರ ಸಾರ್ವತ್ರಿಕ ಚುನಾವಣೆ ಹಾಗೂ ಇತ್ತೀಚಿನ ಉಪಚುನಾವಣೆಗಳಲ್ಲಿ ಕಾಂಗ್ರೆಸ್ ಪಕ್ಷ ಭರ್ಜರಿ ಜಯ ಸಾಧಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ನಾಯಕತ್ವ ಮತ್ತು ಅಹಿಂದ (ಅಲ್ಪಸಂಖ್ಯಾತ, ಹಿಂದುಳಿದ, ದಲಿತ) ಮತಗಳೇ ಮೂಲ ಕಾರಣ. ಒಂದು ವೇಳೆ ಪ್ರಸ್ತುತ ರಾಜಕೀಯ ವಿದ್ಯಮಾನಗಳ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಅವರು ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿದರೆ ಕಾಂಗ್ರೆಸ್ ಪಕ್ಷಕ್ಕೆ ತುಂಬಲಾರದ ನಷ್ಟವಾಗಲಿದೆ ಎಂದರು.

ಸಿದ್ದರಾಮಯ್ಯ ಅವರ ಬದಲಾವಣೆಯಿಂದ ಅಹಿಂದ ಸಮುದಾಯದ ಬೆಂಬಲ ಕೈತಪ್ಪಿದರೆ, ಮುಂದಿನ 2028ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಕನಿಷ್ಠ 40 ಸ್ಥಾನಗಳನ್ನು ಗೆಲ್ಲಲು ಸಹ ತೀವ್ರ ಹೋರಾಟ ನಡೆಸಬೇಕಾಗುತ್ತದೆ. ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಹಾಗೂ ಆಂತರಿಕ ಅಧಿಕಾರ ಹಂಚಿಕೆಯ ಕುರಿತು ಚರ್ಚೆಗಳು ನಡೆಯುತ್ತಿರುವ ಬೆನ್ನಲ್ಲೇ ಲಖನ್ ಜಾರಕಿಹೊಳಿ ಅವರ ಈ ಹೇಳಿಕೆ ಹೊರ ಬಿದ್ದಿದೆ.

# 'ಕಾಲಘಟ್ಟ' ಚಿತ್ರದ "ನೀನೇನೆ ನನ್ನ ದೇವತೆ" ಹಾಡು ಭರ್ಜರಿ ಸದ್ದು

**ಬೆಳಗಾವಿ ವಾರ್ತೆ ಬೆಂಗಳೂರು :** ದಿಕ್ಷೀತಾ ಎಂಟರ್ ಪ್ರೈಸಸ್ ಬೆಂಗಳೂರು ಅವರ "ಕಾಲಘಟ್ಟ" ಕನ್ನಡ ಚಲನಚಿತ್ರದ ಮೊದಲ ಲಿರಿಕಲ್ ಹಾಡು "ನೀನೇನೆ ನನ್ನ ದೇವತೆ" ಬಿಡುಗಡೆಯಾಗಿದ್ದು ಸಿನಿಪ್ರೇಕ್ಷಕರ ಮತ್ತು ಸಂಗೀತ ಪ್ರಿಯರ ಗಮನ ಸೆಳೆದು ಯ್ಯೂಟ್ಯೂಬ್‌ದಲ್ಲಿ ಭರ್ಜರಿ ಸದ್ದು ಮಾಡುತ್ತಿದೆ.

ಹಾಡು ಕೇವಲ ಒಂದು ಮೆಲೋಡಿ ಅಲ್ಲ , ಅದು ನಮ್ಮ ಮಣ್ಣಿನ ಆತ್ಮವನ್ನು ಹೊತ್ತ ಭಾವನೆ. ಹಾಡಿನಲ್ಲಿ ಮೈಲಾರ, ಹರಕೆ, ಜಾಗಟೆ, ಕಾವೇರಿ ಹೀಗೆ ನಮ್ಮ ನಾಡಿನ ನಂಬಿಕೆ ಮತ್ತು ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಪದಗಳನ್ನು ಬಳಸಲಾಗಿದೆ. ಈ ಹಾಡಿನ ಮೂಲಕ ಪ್ರೇಕ್ಷಕರಿಗೆ ತಮ್ಮ ಊರು, ತಮ್ಮ ಪ್ರೀತಿ, ತಮ್ಮ ನೆನಪುಗಳನ್ನು ನಮ್ಮ ನಾಡಿನ ಸಂಸ್ಕೃತಿಯನ್ನು ಹೊಸ ರೀತಿಯಲ್ಲಿ ಮರುಕಳಿಸುವ ಪ್ರಯತ್ನ ಮಾಡಲಾಗಿದೆ ಎಂದು ಯುವ ನಿರ್ದೇಶಕ ಕೆ. ಪ್ರಕಾಶ್ ಅಂಬಳೆ ತಿಳಿಸಿದ್ದಾರೆ.

ಚಿತ್ರದಲ್ಲಿ ನಾಯಕನಾಗಿ ಅಭಿದಾಸ್ ಹಾಗೂ ನಿತಿಲ್ ಅಭಿನಯಿಸಿದ್ದು, ನಾಯಕಿಯರಾಗಿ ಖುಷಿ ಮತ್ತು ಮೇಘ ಕಾಣಿಸಿಕೊಂಡಿದ್ದಾರೆ. ಚಿತ್ರರಂಗದ ಹಿರಿಯ ಕಲಾವಿದರಾದ ಶೋಭರಾಜ್, ಭವ್ಯ, ರಮೇಶ್ ಭಟ್, ಪ್ರಶಾಂತ್ ರವಿ , ಮಂಡ್ಯ ಸೀತಾರಾಮ್ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ. ತಾಂತ್ರಿಕ ವರ್ಗದಲ್ಲಿ ಛಾಯಾಗ್ರಹಣ–ಸದಾಶಿವ ಹಿರೇಮಠ–ರಾಜ್ ಕಡೂರ್, ಸಂಗೀತ ಎ.ಎಂ.ನೀಲ್, ಸಂಕಲನ ವೆಂಕಿ ಯುಡಿವಿ, ಸಾಹಸ ಮಾಸ್‌ಮಾದ, ಸಾಹಿತ್ಯ ನವ್ ಖುಷಿ, ಸ್ಯಾಂಕಿ, ಸಿದ್ದುಶಿವರಾಮ್, ಪ್ರಸಾಧನ ವಿಜಯ್, ಪಿಆರ್ ಓ– ಹರೀಶ್ ಅರಸು, ಡಾ.ಪ್ರಭು



ಗಂಜಿಹಾಳ, ಡಾ.ವೀರೇಶ್ ಹಂಡಿಗಿ, ಪ್ರಚಾರ ವಿನ್ಯಾಸ ಆರ್.ಕ್ರಿಯೇಟಿವ್ , ನಿರ್ದೇಶನ ತಂಡ ಗಣೇಶ್,ರವಿ, ಸಾಗರ್ ಇದ್ದು, ಕಥೆ–ಚಿತ್ರಕಥೆ–ಸಂಭಾಷಣೆ ಜೊತೆಗೆ ನಿರ್ದೇಶನವನ್ನು ಕೆ. ಪ್ರಕಾಶ್ ಅಂಬಳೆ ಮಾಡಿದ್ದಾರೆ. ಲಯನ್ ಚಿಕ್ಕೇಗೌಡ , ಟಿ.ಸಿ ತಳಗವಾಡಿ ನಿರ್ಮಾಪಕರಾಗಿದ್ದಾರೆ. ಮುಂದಿನ ತಿಂಗಳು ರಾಜ್ಯಾದ್ಯಂತ ತೆರೆಗೆ ಬರಲಿರುವ "ಕಾಲಘಟ್ಟ" ಚಿತ್ರತಂಡಕ್ಕೆ ಸಿನಿಪ್ರೇಕ್ಷಕರ ಪ್ರೀತಿ, ಆಶೀರ್ವಾದ ಇರಲಿ ಎಂಬ ಆಶಯವನ್ನು ಚಿತ್ರ ತಂಡ ವ್ಯಕ್ತಪಡಿಸಿದೆ.

# ಸರಳವಾಗಿ ಬಕ್ರೀದ್ ಹಬ್ಬ ಆಚರಣೆ



ಸವದತ್ತಿ ತಾಲೂಕಿನ ಚಿಕ್ಕುಂಬಿ ಗ್ರಾಮದಲ್ಲಿ ಬಕ್ರೀದ್ ಹಬ್ಬದ ಅಂಗವಾಗಿ ಈದ್ಗಾ ಮೈದಾನದಲ್ಲಿ ಮುಸ್ಲಿಮ್ ಬಾಂಧವರು ಸಾಮೂಹಿಕ ಪ್ರಾರ್ಥನೆ ಸಲ್ಲಿಸಿ ಹಬ್ಬದ ಶುಭಾಶಯ ವಿನಿಮಯ ಮಾಡಿಕೊಂಡರು.

**ಬೆಳಗಾವಿ ವಾರ್ತೆ ಉಗರಗೋಳ:** ತಾಲೂಕಿನ ಉಗರಗೋಳ, ಹಿರೇಕುಂಬಿ, ಚಿಕ್ಕುಂಬಿ, ಚುಳಕಿ ಗ್ರಾಮಗಳಲ್ಲಿ ಮುಸ್ಲಿಮ್ ಬಾಂಧವರು ಗುರುವಾರ ಸರಳವಾಗಿ ಬಕ್ರೀದ್ ಹಬ್ಬ ಆಚರಿಸಿದರು.

ಆಯಾ ಗ್ರಾಮಗಳ ಈದ್ಗಾ ಮೈದಾನದಲ್ಲಿ ಮುಸ್ಲಿಂ ಬಾಂಧವರು ನಮಾಜ್ ಮಾಡಿ, ಸಕಲ ಜೀವರಾಶಿ ಒಳಿತಿಗೆ ಸರ್ವಶ್ರೇಷ್ಠ ಅಲ್ಲಾಹ್ ದೇವರಲ್ಲಿ ಪ್ರಾರ್ಥಿಸಿದರು.

ಚಿಕ್ಕುಂಬಿ ಗ್ರಾಮದ ಈದ್ಗಾ ಮೈದಾನದಲ್ಲಿ ಮುಸ್ಲಿಮ್ ಬಾಂಧವರು ಪ್ರಾರ್ಥನೆ ಸಲ್ಲಿಸಿದ ನಂತರ ಸಂದೇಶ ಸಾರಿದ ಧರ್ಮಗುರು ಮೌಲಾವಲಿ ಮುಲ್ಲಾನವರ ಅವರು, ಇಸ್ಲಾಂ ಧರ್ಮ ಶಾಂತಿ, ಸಹೋದರತ್ವ ಭಾವ ಸಾರುತ್ತದೆ. ಮುಸ್ಲಿಮರು ಧರ್ಮದ ಆಚರಣೆಗಳನ್ನು ಪಾಲಿಸುವ ಜತೆಗೆ, ಸಮಾಜದಲ್ಲಿ ಎಲ್ಲರೊಂದಿಗೆ ಸಹಬಾಳ್ವೆಯಿಂದ ಬಾಳಬೇಕು ಎಂದು ಹೇಳಿದರು.

ಸಮಸ್ತ ಮುಸ್ಲಿಂ ಬಾಂದವರೆಲ್ಲಾ ಸೇರಿಸಾಮೂಹಿಕ ಪ್ರಾರ್ಥಿನೆ ಸಲ್ಲಿಸಿದರು. ನಂತರ ಪರಸ್ಪರರು ಬಕ್ರೀದ್ ಹಬ್ಬದ ಶುಭಶಯಗಳನ್ನು ವಿನಿಮಯ ಮಾಡಿಕೊಂಡರು.


ಮಹಮ್ಮದ್‌ಅಲಿ ದೊಡಮನಿ, ನಭಿಸಾಬ್ ಅಸ್ತಖಾನ, ನಭೀಸಾಬ್ ದೊಡಮನಿ, ಮಕ್ತುಮಸಾಬ್ ದೊಡಮನಿ, ಆರ್.ಎಂ.ನರಗುಂದ, ಶಬ್ಬೀರ್ ಜಮಾದಾರ, ಹುಸೇನಸಾಬ್ ದೊಡಮನಿ, ಇಸ್ಮಾಯಿಲ್ ದೊಡಮನಿ, ಜಂಗ್ಲಿಸಾಬ್ ದೊಡಮನಿ, ರಾಜೇಸಾಬ್ ನದಾಫ್, ಮಹಮ್ಮದ್‌ರಫಿ ನರಗುಂದ, ಕರೀಮ್‌ಸಾಬ ನಧಾಫ್, ಹುಸೇನಸಾಬ್ ಅಲ್ಲಿಸಾಬನವರ, ರಜಾಕ್ ಕುಷ್ಟಗಿ, ಮಾಬುಸಾಬ ಸವಣೂರ ಬುಡ್ಡೆಸಾಬ್ ದೊಡಮನಿ ಹಾಗೂ ಇತರರಿದ್ದರು.

# ಬಕ್ರೀದ್ ಹಬ್ಬ; ಸಾಮೂಹಿಕ ಪ್ರಾರ್ಥನೆ

**ಬೆಳಗಾವಿ ವಾರ್ತೆ ಮೂಡಲಗಿ :** ತ್ಯಾಗ ಮತ್ತು ಬಲಿದಾನದ ಸಂಕೇತವಾಗಿರುವ ಬಕ್ರೀದ್ ಅಂಗವಾಗಿ ಪಟ್ಟಣದ ಗುರ್ಲಾಪುರ ರಸ್ತೆಯಲ್ಲಿನ ಅತ್ತಾರ ಕಲ್ಯಾಣ ಮಂಟಪದಲ್ಲಿ, ಸುನ್ನಿ ಸಮಾಜದ ಮುಸ್ಲಿಮರು ಗುರುವಾರ ಸಾಮೂಹಿಕ ಪ್ರಾರ್ಥನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸುನ್ನಿ ಸಮಾಜದ ಮುಖಂಡ ಮಲ್ಲಿಕಜಾನ ಕಳ್ಳಿಮನಿ ಮಾತನಾಡಿ, ಬಕ್ರೀದ್ ಹಬ್ಬವು ತ್ಯಾಗ ಮತ್ತು ಬಲಿದಾನದ ಪ್ರತೀಕ. ಬಡವರಿಗೆ, ನಿರ್ಗತಿಕರಿಗೆ ದಾನ, ಧರ್ಮ ಮಾಡಲು ಅವಕಾಶ ಮಾಡಿಕೊಡುವುದೇ ಬಕ್ರೀದ್ ಹಬ್ಬದ ವಿಶೇಷತೆ. ಎಲ್ಲರೂ ಕೂಡಿ ಸಹೋದರತೆ, ಸಮಾನತೆ ಹಾಗೂ ಸಹಬಾಳ್ವೆಯಿಂದ ಬದುಕು ನಡೆಸುವ, ಶಾಂತಿ ಸೌಹಾರ್ದತೆಯ ಪ್ರತೀಕವಾಗಿದೆ ಈ ಬಕ್ರೀದ್ ಹಬ್ಬ ಎಂದರು.

ಮನುಕುಲಕ್ಕೆ ಶಾಂತಿ ನೀಡಲಿ, ಮಳೆಯಾಗಲಿ, ಬೆಳೆಯಾಗಲಿ. ಶಾಂತಿ ನೆಲೆಸಲಿ ಎಂದು ದೇವರಲ್ಲಿ ಪ್ರಾರ್ಥಿಸಿದ್ದೇವೆ. ಬೇರೆಯವರ ಬಗ್ಗೆ ಇರುವ ಕೆಡಕನ್ನು ನಾವೆಲ್ಲಾ ತ್ಯಾಗ ಮಾಡಬೇಕಾಗಿದೆ ಎಂದರು.



ಬಕ್ರೀದ್ ಹಬ್ಬವು ಸಮಾಜದಲ್ಲಿ ಶಾಂತಿ, ಸಮೃದ್ಧಿ ನೆಲೆಸುವಂತೆ ಮಾಡಲಿ, ಎಲ್ಲರೂ ಕೂಡಿ ಬಾಳುವಂತಾಗಲಿ, ಉತ್ತಮ ಮಳೆ, ಬೆಳೆಯಾಗಿ ದೇಶ ಸಮೃದ್ಧಿಯಾಗಲಿ ಎಂದು ಆಶಿಸಿದರು.

ಈ ಸಂದರ್ಭದಲ್ಲಿ ಮೂಡಲಗಿ ತಹಸೀಲ್ದಾರ್ ಶ್ರೀಶೈಲ್ ಗುಡಮೆ, ಪ್ರೊಬೆಷನರಿ ಪಿಎಸ್ ರಾಜು ಪೂಜಾರ, ಪುರಸಭೆ ಮಾಜಿ ಅಧ್ಯಕ್ಷರಾದ ಹಣಮಂತ ಗುಡ್ಲಮನಿ, ಸಂತೋಷ ಸೋನವಾಲಕರ, ಮತ್ತು ಲಕ್ಷ್ಮಣ ಗುಡೇರ, ಮದಾರ ಮುಗಟಖಾನ, ಇಮಾಮಹು ಸೇನ್ ಮುಲ್ಲಾ, ಮಲ್ಲಿಕಸಬಾ ಅತ್ತಾರ, ದಸ್ತಾಗೀರ ನಾಧಪ್, ಮಹಿಬುಬೂ ಥರಥರಿ, ಪಕರು ಸಬಾ ದಬಾಡಿ, ಮೀರಾಸಬಾ ನಿಡಗುಂದಿ, ಇಬ್ರಾಹಿಂ ಅತ್ತಾರ ಸೇರಿದಂತೆ ಅನೇಕ ಸುನ್ನಿ ಸಮಾಜದ ಜನರು ಭಾಗವಹಿಸಿದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001